# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 292 ₹4, SUNDAY, 14 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

## ದೆಹಲಿ ಪ್ರವಾಸ ಬಳಿಕ ವಿದೇಶಕ್ಕೆ ಹಾರಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಕಳೆದ 4 ದಿನಗಳಿಂದ ದೆಹಲಿ ಪ್ರವಾಸದಲ್ಲಿದ್ದ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಶುಕ್ರವಾರ ರಾತ್ರಿ ವಿದೇಶಕ್ಕೆ ಪ್ರಯಾಣ ಬೆಳೆಸಿದ್ದಾರೆ ಎಂದು ಮೂಲಗಳಿಂದ ತಿಳಿದುಬಂದಿದೆ.

'ರಾಜ್ಯದಲ್ಲಿ ಉಪಮುಖ್ಯಮಂತ್ರಿ ಹುದ್ದೆ ಸೃಷ್ಟಿಸುವ ಸಂಬಂಧವಾಗಿ ದೆಹಲಿಯಲ್ಲಿ ಹೈಕಮಾಂಡ್ ಜೊತೆಗೆ ಸಾಕಷ್ಟು ಚರ್ಚೆ ನಡೆದಿದ್ದವು. ಈ ಸಂಬಂಧ ಹೈಕಮಾಂಡ್ ಹಲವು ಸೂಚನೆಗಳನ್ನು ನೀಡಿದ್ದು, ಇದರಿಂದ ಬೇಸರಗೊಂಡು ವಿದೇಶಕ್ಕೆ ಹೋಗಿರಬಹುದು ಹೇಳಲಾಗುತ್ತಿದೆ.

ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ಸಭೆ ನಡೆಸಿದ್ದು, ಸಭೆಗೆ ಕರ್ನಾಟಕ, ತಮಿಳುನಾಡು ಹಾಗೂ ತೆಲಂಗಾಣದ ಪಾರ್ಲಿಮೆಂಟ್ ಸಮನ್ವಯಾಧಿಕಾರಿಗಳನ್ನು ಆಹ್ವಾನಿಸಲಾಗಿತ್ತು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ನೇತೃತ್ವದಲ್ಲಿ ಸಭೆ ನಡೆದಿತ್ತು. ರಾಜ್ಯದಿಂದ ಸಚಿವರು ಹಾಗೂ ಕೆಲವು ಪ್ರಮುಖ ನಾಯಕರು ಈ ಸಭೆಯಲ್ಲಿ ಭಾಗಿಯಾಗಿದ್ದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿ ಇದೆ. ಈ ನಿಟ್ಟಿನಲ್ಲಿ ನಿಮ್ಮಲ್ಲಿ ಹೆಚ್ಚಿನ ನಿರೀಕ್ಷೆ ಇದೆ. ಈ ಹಿನ್ನೆಲೆಯಲ್ಲಿ ಚುನಾವಣೆಯನ್ನು ಗಂಭೀರವಾಗಿ ಎದುರಿಸಿ. ಒಂದು ವೇಳೆ ಚುನಾವಣೆಯಲ್ಲಿ ಸೋತಿದ್ದೇ ಆದರೆ, ಸಂಬಂಧಪಟ್ಟ ಸಚಿವರ ತಲೆದಂಡ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆಂದು ತಿಳಿದುಬಂದಿದೆ.

# ನಾಮಫಲಕಗಳಲ್ಲಿ ಬೆಳಗಾಂವ, ಬೆಳಗಾಮ್ ಬೇಡ; ಬೆಳಗಾವಿ ಬಳಸಿ

## ಸರ್ಕಾರದ ಆದೇಶ ಬೆನ್ನಲ್ಲೇ ಅಂಗಡಿಗಳಿಗೆ ಪಾಲಿಕೆ ನೋಟಿಸ್

ಬೆಳಗಾವಿ: ಬೆಳಗಾವಿ ಮಹಾನಗರದ ಎಲ್ಲ ಅಂಗಡಿ/ಮುಗ್ಗಟ್ಟುಗಳ ನಾಮಫಲಕಗಳಲ್ಲಿ ಶೇ60 ರಷ್ಟು ಕನ್ನಡವನ್ನು ಕಡ್ಡಾಯವಾಗಿ ಬಳಸಬೇಕು. ಜೊತೆಗೆ ವಿಳಾಸದಲ್ಲಿ ಬೆಳಗಾಂವ, ಬೆಳಗಾಮ್ ಅಲ್ಲದೆ, ಬೆಳಗಾವಿ ಎಂದು ನಮೋದಿಸುವಂತೆ ರಾಜ್ಯ ಸರ್ಕಾರ ಆದೇಶಿಸಿದ್ದು, ಇದರ ಬೆನ್ನಲ್ಲೇ ಬೆಳಗಾವಿ ಮಹಾನಗರ ಪಾಲಿಕೆಯು ಸುಮಾರು 2000 ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಿದೆ ಎಂದು ತಿಳಿದುಬಂದಿದೆ.

ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಅವರು ಎರಡು ಸಾವಿರ ಅಂಗಡಿಗಳಿಗೆ ನೋಟಿಸ್ ನೀಡಿದ್ದಾರೆ.

ನಗರದ ಕೆಲವು ಅಂಗಡಿ ಮಾಲಿಕರು ಬೆಳಗಾವಿ ಬದಲು ಬೆಳಗಾಂವ, ಬೆಳಗಾಂ ಎಂದು ನಾಮಫಲಕಗಳಲ್ಲಿ ಬರೆಸಿದ್ದು, ಈ ಹಿನ್ನೆಲೆಯಲ್ಲಿ ಆಯಕ್ತರು ನೋಟಿಸ್ ಜಾರಿ ಮಾಡಿದ್ದಾರೆ.

ನಾಮಫಲಕಗಳನ್ನು ಶೇಕಡಾ 60 ರಷ್ಟು ಬಳಸಬೇಕೆಂದು ಸರ್ಕಾರ ಹೇಳಿದ ಬೆನ್ನಲ್ಲೇ ಆಯಕ್ತರು ಬೆಳ್ಳಂಬೆಳಿಗ್ಗೆ ನಗರ ಸಂಚಾರ ಕೈಗೊಂಡರು. ಈ ವೇಳೆ ನಗರದ ಹಲವು




ಅಂಗಡಿಗಳಲ್ಲಿ ಕನ್ನಡ ಬಳಕೆ ತೀರ ವಿರಳವಾಗಿತ್ತು. ಮತ್ತು ವಿಳಾಸದ ಸ್ಥಳದಲ್ಲಿ ಬೆಳಗಾಂವ, ಬೆಳಗಾಮ್ ಎಂದು ಬರೆಸಿರುವುದು ಕಂಡು ಬಂದಿತ್ತು. ಇದನ್ನು ಮನಗಂಡ ಆಯುಕ್ತರು ಅಂಗಡಿಗಳಿಗೆ ನೋಟಿಸ್ ಜಾರಿ ಮಾಡಿದ್ದಾರೆ.

ರಾಜ್ಯ ಸರ್ಕಾರ ನಗರಪಾಲಿಕೆ/ಜಿಲ್ಲೆಯಾದ್ಯಂತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ/ಮುಂಗಟ್ಟುಗಳು/ವಾಣಿಜ್ಯ ಸಂಕೀರ್ಣಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಭಾಗವನ್ನು ಕನ್ನಡವನ್ನು ಬಳಸತಕ್ಕದ್ದು. ಜೊತೆಗೆ ವಿಳಾಸದಲ್ಲಿ "ಬೆಳಗಾವಿ" ಎಂದು ನಮೂದಿಸಬೇಕಾಗಿರುತ್ತದೆ. ಆದರೆ ಪಾಲಿಕೆ ವ್ಯಾಪ್ತಿಯಲ್ಲಿ ಹಲವು ಉದ್ದಿಮೆದಾರರು ತಮ್ಮ ಉದ್ದಿಮೆಯ ನಾಮಫಲಕದಲ್ಲಿ ಬೆಳಗಾಂವ ಅಥವಾ ಬೆಳಗಾಮ್ ಎಂದು ನಮೂದಿಸಿದ್ದು. ಶೇ.50 ರಷ್ಟು ಭಾಗವನ್ನು ಕನ್ನಡ ಭಾಷೆಗೆ ಪ್ರಥಮಾದ್ಯತೆ ನೀಡದೇ ನಾಮಫಲಕವನ್ನು ಉಪಯೋಸುತ್ತಿರುವುದು ಕಂಡುಬಂದಿದೆ.

ಇಂತಹ ಉದ್ದಿಮೆದಾರರಿಗೆ ನೀಡಿದ ಪರವಾನಿಗೆಯನ್ನು ರದ್ದುಗೊಳಿಸಿ ಅಂಗಡಿಯನ್ನು ಬಂದ್ ಅಥವಾ ಸೀಲ್ ಮಾಡಲಾಗುದು ಎಂದು ನೋಟಿಸ್ ನಲ್ಲಿ ಎಚ್ಚರಿಸಿದ್ದಾರೆ.

### ನಾಮಫಲಕಗಳಲ್ಲಿ ಕನ್ನಡ ಬಳಸದ 2 ಸಾವಿರ ಮಳಿಗೆಗೆ ನೋಟಿಸ್



ಬೆಳಗಾವಿ: ಮಹಾನಗರದ ಎಲ್ಲ ಅಂಗಡಿ/ಮುಗ್ಗಟ್ಟುಗಳ ನಾಮಫಲಕಗಳಲ್ಲಿ ಶೇ60 ರಷ್ಟು ಕನ್ನಡವನ್ನು ಕಡ್ಡಾಯವಾಗಿ ಬಳಸಬೇಕು. ಜೊತೆಗೆ ವಿಳಾಸದಲ್ಲಿ ಬೆಳಗಾವಿ ಅಂತ ನಮೋದಿಸುವಂತೆ ಮಹಾನಗರ ಪಾಲಿಕೆಆಯುಕ್ತ ಅಶೋಕ ದುಡಗುಂಟಿ 2000 ಅಂಗಡಿಗಳಿಗೆ ನೋಟಿಸ್ ನೀಡಿದ್ದಾರೆ.

## ದೇಶದ ಅತಿ ಉದ್ದದ ಸಮುದ್ರ ಸೇತುವೆ ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ ಉದ್ಘಾಟನೆ



ಮುಂಬೈ: ದೇಶದ ಅತಿ ಉದ್ದದ ಸಮುದ್ರ ಸೇತುವೆ, ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ (MTHL) ಅನ್ನು ಪ್ರಧಾನಿ ನರೇಂದ್ರ ಮೋದಿ ಅವರು ಚಿಶುಕ್ರವಾರ ಉದ್ಘಾಟಿಸಿದರು.

ಮುಂಬೈನ ಸೆವ್ರಿ ಮತ್ತು ರಾಯಗಡ ಜಿಲ್ಲೆಯ ಪನ್ವೆಲ್ ನಡುವಿನ 21.8 ಕಿಮೀ ಉದ್ದದ ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ ಸೇತುವೆಗೆ ಪ್ರಧಾನಿ ಮೋದಿ ಅಧಿಕೃತವಾಗಿ ಚಾಲನೆ ನೀಡಿದರು.

ಈ ವೇಳೆ ಮಹಾರಾಷ್ಟ್ರ ರಾಜ್ಯಪಾಲ ರಮೇಶ್ ಬೈಸ್, ಮುಖ್ಯಮಂತ್ರಿ ಏಕನಾಥ್ ಶಿಂಧೆ, ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರು ಹಾಜರಿದ್ದರು.

ಈ ಸೇತುವೆ ರಾಯಗಢ ಜಿಲ್ಲೆಯ ಪನ್ವೆಲ್ ಮತ್ತು ದಕ್ಷಿಣ ಮಧ್ಯ ಮುಂಬೈನ ಸೆವ್ರಿ ನಡುವಿನ ಅಂತರವನ್ನು ಕಡಿಮೆಗೊಳಿಸುತ್ತದೆ ಮತ್ತು ಪ್ರಯಾಣದ ಸಮಯ ಸುಮಾರು ಎರಡು ಗಂಟೆಗಳಿಂದ 15 ರಿಂದ 20 ನಿಮಿಷಗಳಿಗೆ ಇಳಿಯಲಿದೆ.

## ರಾಷ್ಟ್ರಪತಿ ದ್ರೌಪದಿ ಮುರ್ಮುರಿಂದ ರಾಮ ಮಂದಿರ ಉದ್ಘಾಟಿಸಬೇಕು: ಉದ್ಧವ್ ಠಾಕ್ರೆ ಆಗ್ರಹ

ಮುಂಬೈ: ಅಯೋಧ್ಯೆಯ ರಾಮ ಮಂದಿರದ ಉದ್ಘಾಟನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನೆರವೇರಿಸಬೇಕು ಎಂದು ಶಿವಸೇನೆ(ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು ಶನಿವಾರ ಒತ್ತಾಯಿಸಿದ್ದಾರೆ. ಏಕೆಂದರೆ ಇದು "ರಾಷ್ಟ್ರೀಯ ಹೆಮ್ಮೆಯ ವಿಷಯ ಮತ್ತು ದೇಶದ ಸ್ವಾಭಿಮಾನ" ಎಂದು ಮಹಾರಾಷ್ಟ್ರ ಮಾಜಿ ಸಿಎಂ ಹೇಳಿದ್ದಾರೆ.



ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಠಾಕ್ರೆ, ಜನವರಿ 22 ರಂದು ಅಯೋಧ್ಯೆ ದೇವಾಲಯದ ಉದ್ಘಾಟನೆಯ ದಿನ ಮುರ್ಮು ಅವರನ್ನು ನಾಸಿಕ್‌ನ ಕಲಾರಾಮ್ ದೇವಾಲಯಕ್ಕೆ ಆಹ್ವಾನಿಸುತ್ತೇವೆ ಎಂದು ತಿಳಿಸಿದ್ದಾರೆ.

ಜನವರಿ 22 ರಂದು ನಮ್ಮ ಪಕ್ಷದ ಮುಖಂಡರು ಮತ್ತು ಪದಾಧಿಕಾರಿಗಳೊಂದಿಗೆ ನಾಸಿಕ್‌ನ ಐತಿಹಾಸಿಕ ಕಲಾರಾಮ್ ದೇವಾಲಯಕ್ಕೆ ಭೇಟಿ ನೀಡಿ, ಗೋದಾವರಿ ನದಿಯ ದಡದಲ್ಲಿ 'ಮಹಾ ಆರತಿ' ಮಾಡುವುದಾಗಿ ಠಾಕ್ರೆ ಈ ಹಿಂದೆ ಘೋಷಿಸಿದ್ದರು.

ಒಂದು ದಿನದ ನಂತರ, ಅಂದರೆ ಜನವರಿ 23 ರಂದು ಶಿವಸೇನೆ ನಾಸಿಕ್‌ನಲ್ಲಿ ಪಕ್ಷದ ಪದಾಧಿಕಾರಿಗಳ ಸಮಾವೇಶವನ್ನು ಸಹ ನಡೆಸಲಿದೆ, ಅಲ್ಲಿ ಠಾಕ್ರೆ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಗುಜರಾತ್‌ನ ಸೋಮನಾಥ ದೇವಾಲಯವನ್ನು ಪುನಃಸ್ಥಾಪಿಸಿದ ನಂತರ, ದೇಶದ ಮೊದಲ ರಾಷ್ಟ್ರಪತಿ ಡಾ ರಾಜೇಂದ್ರ ಪ್ರಸಾದ್ ಅವರು ಜೀರ್ಣೋದ್ಧಾರ ಸಮಾರಂಭವನ್ನು ಉದ್ಘಾಟಿಸಿದ್ದರು ಎಂದು ಠಾಕ್ರೆ ನೆನಪಿಸಿಕೊಂಡರು.

"ಇದು (ಅಯೋಧ್ಯೆ ರಾಮ ಮಂದಿರ) ರಾಷ್ಟ್ರೀಯ ಹೆಮ್ಮೆಯ ವಿಷಯವಾಗಿರುವುದರಿಂದ ಮತ್ತು ದೇಶದ ಸ್ವಾಭಿಮಾನಕ್ಕೆ ಸಂಬಂಧಿಸಿದ ವಿಚಾರವಾಗಿರುವುದರಿಂದ ರಾಷ್ಟ್ರಪತಿ ಮುರ್ಮು ಅವರಿಂದ ರಾಮಲಲ್ಲಾ ಪ್ರತಿಷ್ಠಾಪನೆ ಸಮಾರಂಭವನ್ನು ಉದ್ಘಾಟಿಸಬೇಕು" ಎಂದು ಠಾಕ್ರೆ ಹೇಳಿದರು.

## ಇಂಡಿಯಾ ಮೈತ್ರಿಕೂಟದ ಮುಖ್ಯಸ್ಥರಾಗಿ ಮಲ್ಲಿಕಾರ್ಜುನ ಖರ್ಗೆ ನೇಮಕ

ದೆಹಲಿ: ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ವಿರೋಧ ಪಕ್ಷದ ಇಂಡಿಯಾ ಮೈತ್ರಿಕೂಟದ ಅಧ್ಯಕ್ಷರನ್ನಾಗಿ ಘೋಷಿಸಲಾಗಿದೆ.

ಶನಿವಾರ ನಡೆದ ಇಂಡಿಯಾ ಮೈತ್ರಿಕೂಟದ ಉನ್ನತ ನಾಯಕರ ಸಭೆಯಲ್ಲಿ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ. ಸಭೆಯಲ್ಲಿ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರಿಗೆ ಇಂಡಿಯಾ ಮೈತ್ರಿಕೂಟದ ಸಂಚಾಲಕ ಹುದ್ದೆಯನ್ನು ನೀಡಲಾಗಿದೆ. ಶನಿವಾರ ನಡೆದ INDIA ಮೈತ್ರಿಕೂಟದ ಅಗ್ರಗಣ್ಯ ನಾಯಕರ ಸಭೆಯಲ್ಲಿ ಈ ನಿರ್ಧಾರವನ್ನು ಸರ್ವಾನುಮತದಿಂದ ತೆಗೆದುಕೊಳ್ಳಲಾಗಿದೆ.

ಸಭೆಗೆ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಮತ್ತು ತೃಣಮೂಲ ಕಾಂಗ್ರೆಸ್



(ಟಿಎಂಸಿ) ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರು ಗೈರಾಗಿದ್ದು, ಈ ನಿರ್ಧಾರದ ಬಗ್ಗೆ ಅವರಿಗೆ ತಿಳಿಸಲಾಗುವುದು ಎಂದು ಮೈತ್ರಿಕೂಟದ ಸದಸ್ಯ ಪಕ್ಷಗಳು ತಿಳಿಸಿದೆ. ನಿತೀಶ್ ಕುಮಾರ್ ಅವರು ಕಾಂಗ್ರೆಸ್ ಪಕ್ಷದಿಂದ ಯಾರಾದರೂ ಒಬ್ಬರು ಈ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು ಎಂದು ಹೇಳಿ ಸಂಚಾಲಕ ಹುದ್ದೆಯನ್ನು ತಿರಸ್ಕರಿಸಿದ್ದಾರೆ ಎಂದು ಸಭೆಯಲ್ಲಿದ್ದ ಜೆಡಿಯು ನಾಯಕ ಸಂಜಯ್ ಝಾ ಹೇಳಿದ್ದಾರೆ. ವರದಿಯ ಪ್ರಕಾರ, ಎಲ್ಲಾ ಪಕ್ಷಗಳು ಒಪ್ಪಿಗೆ ಇದ್ದರೆ ಮಾತ್ರ ಸಂಚಾಲಕರ ಹುದ್ದೆಯನ್ನು ಒಪ್ಪಿಕೊಳ್ಳುವುದಾಗಿ ನಿತೀಶ್ ಕುಮಾರ್ ಹೇಳಿದ್ದಾರೆ. 2024ರ ಸಾರ್ವತ್ರಿಕ ಚುನಾವಣೆಯಲ್ಲಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎಯನ್ನು ಸೋಲಿಸಲು ರಚಿಸಲಾದ 26 ಪಕ್ಷಗಳ ಮೈತ್ರಿಕೂಟಕ್ಕೆ ಜೆಡಿಯು, ನಿತೀಶ್ ಕುಮಾರ್ ಅವರನ್ನು ಸಂಚಾಲಕರನ್ನಾಗಿ ಮಾಡಲು ಬಯಸಿತ್ತು ಆದರೆ ಇದಕ್ಕೆ ಟಿಎಂಸಿಯಿಂದ ವಿರೋಧ ವ್ಯಕ್ತವಾಗುತ್ತಿದೆ ಎಂದು ಪಿಟಿಐ ವರದಿ ಮಾಡಿದೆ. ಸೀಟು ಹಂಚಿಕೆ ಕಾರ್ಯಸೂಚಿ, ಭಾರತ್ ಜೋಡೋ ನ್ಯಾಯ್ ಯಾತ್ರೆಯಲ್ಲಿ ಭಾಗವಹಿಸುವಿಕೆ ಮತ್ತು ಮೈತ್ರಿಗೆ ಸಂಬಂಧಿಸಿದ ಇತರ ಸಮಸ್ಯೆಗಳನ್ನು ಪರಿಶೀಲಿಸಲು ಇಂಡಿಯಾ ಮೈತ್ರಿಕೂಟದ ನಾಯಕರ ವರ್ಚುವಲ್ ಸಭೆ ನಡೆದಿದೆ. ನ್ಯಾಷನಲಿಸ್ಟ್ ಕಾಂಗ್ರೆಸ್ ಪಾರ್ಟಿ (ಎನ್‌ಸಿಪಿ) ಮುಖ್ಯಸ್ಥ ಶರದ್ ಪವಾರ್ ಅವರು ಮುಂಬೈನಲ್ಲಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಭೆಯಲ್ಲಿ ಭಾಗವಹಿಸಿದರು.

ತಮಿಳುನಾಡು ಮುಖ್ಯಮಂತ್ರಿ ಮತ್ತು ಡಿಎಂಕೆ ನಾಯಕ ಎಂಕೆ ಸ್ಟಾಲಿನ್ ಮತ್ತು ಪಕ್ಷದ ನಾಯಕಿ ಕನಿಮೊಳಿ ಕರುಣಾನಿಧಿ ಅವರು ಚೆನ್ನೈನಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

ಇದಲ್ಲದೆ ಮೈತ್ರಿಕೂಟದ ಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸೀತಾರಾಂ ಯೆಚೂರಿ ಸೇರಿದಂತೆ 14 ಪಕ್ಷಗಳ ನಾಯಕರು ಭಾಗವಹಿಸಿದ್ದರು.



## ಅಬಕಾರಿ ಹಗರಣ: ದೆಹಲಿ ಸಿಎಂ ಕೇಜ್ರಿವಾಲ್‌ಗೆ 4ನೇ ಬಾರಿ ಇಡಿ ಸಮನ್ಸ್ ಜಾರಿ

ನವದೆಹಲಿ: ಈಗ ರದ್ದಾಗಿರುವ ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ನಾಲ್ಕನೇ ಬಾರಿ ಸಮನ್ಸ್ ಜಾರಿ ಮಾಡಿದೆ ಎಂದು ಅಧಿಕೃತ ಮೂಲಗಳು ಶನಿವಾರ ತಿಳಿಸಿವೆ.

ಆಮ್ ಆದ್ಮಿ ಪಕ್ಷದ(ಎಎಪಿ) ರಾಷ್ಟ್ರೀಯ ಸಂಚಾಲಕರೂ ಆಗಿರುವ ಕೇಜ್ರಿವಾಲ್ ಅವರಿಗೆ ಜನವರಿ 18 ರಂದು ಇಡಿ ಮುಂದೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

55 ವರ್ಷದ ಕೇಜ್ರಿವಾಲ್ ಅವರು ಜನವರಿ 3 ರಂದು ಇಡಿ ಮುಂದೆ ಮೂರನೇ ಬಾರಿ ವಿಚಾರಣೆಗೆ ಹಾಜರಾಗಲು ನಿರಾಕರಿಸಿದ್ದರು.

ಈ ಹಿಂದೆ 2023 ರ ನವೆಂಬರ್ 2 ರಂದು ಮತ್ತು ಡಿಸೆಂಬರ್ 21 ರಂದು ವಿಚಾರಣೆಗೆ ಹಾಜರಾಗುವಂತೆ ದೆಹಲಿ ಮುಖ್ಯಮಂತ್ರಿಗೆ ಇಡಿ ಸಮನ್ಸ್ ಜಾರಿ ಮಾಡಿತ್ತು. ಆದರೆ ವಿಚಾರಣೆಗೆ ಗೈರು ಆಗಿದ್ದ ಕೇಜ್ರಿವಾಲ್ ಅವರು ತಮಗೆ ನೀಡಿರುವ ನೋಟಿಸ್ ಕಾನೂನು ಬಾಹಿರ ಎಂದು ಲಿಖಿತ ಉತ್ತರ ಕಳುಹಿಸಿದ್ದರು.

## ಪ್ರಧಾನಿ ಮೋದಿಯವರ 3ನೇ ಅವಧಿಯಲ್ಲಿ ಭಾರತ ಜಗತ್ತಿನ 3ನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮಲಿದೆ: ಅಮಿತ್ ಶಾ

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಗುಜರಾತ್ನಲ್ಲಿ ನಡೆದ 'ವೈಬ್ರೆಂಟ್ ಗುಜರಾತ್ ಶೃಂಗಸಭೆ'ಯ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದರು. 'ಮೋದಿಯವರ ಮೂರನೇ ಬಾರಿಯ ಪ್ರಧಾನಿಯ ಅವಧಿಯಲ್ಲಿ ಭಾರತವು ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಮೂಲಕ ಜಗತ್ತಿನ ಮುಂದೆ ಹೆಮ್ಮೆಯಿಂದ ತಲೆ ಎತ್ತಿ ನಿಲ್ಲಲಿದೆ' ಎಂದು ಶಾ ವಿಶ್ವಾಸ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿಯವರು ಎರಡು ದಶಕಗಳ ಹಿಂದೆಯೇ 'ವೈಬ್ರೆಂಟ್ ಗುಜರಾತ್' ಅನ್ನು ರೂಪಿಸಿದ್ದರು ಮತ್ತು ಅದರ ಫಲಿತಾಂಶವನ್ನು ನಾವಿಂದು ಕಾಣಬಹುದು. ಸ್ವಾವಲಂಬಿ ಮತ್ತು ಸಂಪೂರ್ಣ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವಲ್ಲಿ ವೈಬ್ರೆಂಟ್ ಗುಜರಾತ್ ಶೃಂಗಸಭೆಯ ಪಾತ್ರವು ತುಂಬಾ ಮಹತ್ವದ್ದಾಗಿದೆ. ನವ ಕಲ್ಪನೆಗಳು, ನಾವೀನ್ಯತೆ ಮತ್ತು ಹೂಡಿಕೆಯ ಮೂಲಕ, 'ವೈಬ್ರೆಂಟ್ ಗುಜರಾತ್ ಶೃಂಗಸಭೆ' ಗುಜರಾತ್ ಮಾತ್ರವಲ್ಲದೆ ಇಡೀ ದೇಶದ ಆರ್ಥಿಕತೆಯನ್ನು ಬಲಪಡಿಸಿದೆ. ದಶಕಗಳ ಕಾಲ,ಗುಜರಾತ್ನಲ್ಲಿ ಆಡಳಿತ ನೀಡಿದ ಮೋದಿ–ಶಾ ಜೋಡಿಯು ಗುಜರಾತನ್ನು ಮಾದರಿಯಾಗಿ ಅಭಿವೃದ್ಧಿಪಡಿಸಲು ಶ್ರಮಿಸಿದರು, ಮತ್ತು ಈ ಗುಜರಾತ್ ಅಭಿವೃದ್ಧಿ ಮಾದರಿಯ ಆಧಾರದ ಮೇಲೆಯೇ ದೇಶದ ನಾಗರಿಕರು ಮೋದಿಯವರಿಗೆ



ರಾಷ್ಟ್ರದ ಅಧಿಕಾರ ಹಸ್ತಾಂತರಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಇಂದು ಆ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿಕೊಂಡು ಹೋಗುತ್ತಿದ್ದಾರೆ. ಇಡೀ ಪ್ರಪಂಚದಲ್ಲಿ ಉತ್ಪಾದನೆ ಮತ್ತು ಹೂಡಿಕೆಗೆ ಭಾರತವು ಅತ್ಯಂತ ನೆಚ್ಚಿನ ತಾಣವಾದರೆ, ಭಾರತದೊಳಗೆ ಗುಜರಾತ್ ಅತ್ಯಂತ ನೆಚ್ಚಿನ ತಾಣವಾಗಿದೆ.

ಪ್ರಧಾನಿಯವರ ನಾಯಕತ್ವದಲ್ಲಿ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ, 'ವೈಬ್ರೆಂಟ್ ಗುಜರಾತ್ ಶೃಂಗಸಭೆ' ನವ ಕಲ್ಪನೆಗಳು ಮತ್ತು ನಾವೀನ್ಯತೆಗೆ ವೇದಿಕೆಯನ್ನು ಒದಗಿಸುವ ಮೂಲಕ ರಾಜ್ಯದೊಳಗೆ ಹೂಡಿಕೆಯನ್ನು ತರಲು ಕೆಲಸ ಮಾಡಿದೆ. ಇದು ಗುಜರಾತ್ ಮಾತ್ರವಲ್ಲದೇ ಇಡೀ ದೇಶದ ಆರ್ಥಿಕತೆಗೆ ಪ್ರಯೋಜನ ನೀಡಿದೆ. ಈ ಕಾರಣಕ್ಕಾಗಿಯೇ ದೇಶದ ಹಲವು ರಾಜ್ಯಗಳು ವೈಬ್ರಂಟ್ ಗುಜರಾತ್ ಮಾದರಿಯನ್ನು ತಮ್ಮ ಕೈಗಾರಿಕಾ ಅಭಿವೃದ್ಧಿಗಾಗಿ ಅಳವಡಿಸಿಕೊಂಡಿವೆ. ಮೋದಿಯವರು ಗುಜರಾತ್‌ಅನ್ನು ಒಳ್ಳೆಯ ನೀತಿ ಚಾಲಿತ ರಾಜ್ಯವನ್ನಾಗಿ ಮಾಡಿದರು, ಅದರಿಂದಾಗಿ ಇಂದು ಪ್ರಪಂಚದಾದ್ಯಂತದ ಹೂಡಿಕೆದಾರರು ಆ ನೀತಿಗಳಿಂದ ಆಕರ್ಷಿತರಾಗಿ ಗುಜರಾತ್ನಲ್ಲಿ ಹೂಡಿಕೆ ಮಾಡುತ್ತಿದ್ದಾರೆ. ಗುಜರಾತ್ ಭಾರತದ ಅಭಿವೃದ್ಧಿಯ ಹೆಬ್ಬಾಗಿಲಾಗಿದೆ.

ಮೋದಿಯವರು ದೇಶದ ಪ್ರಧಾನ ಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಾಗ ಭಾರತದ ಆರ್ಥಿಕತೆಯು ಜಗತ್ತಿನ 11 ನೇ ಸ್ಥಾನದಲ್ಲಿತ್ತು ಮತ್ತು ಇಂದು ಒಂದು ದಶಕದ ಅವಧಿಯಲ್ಲಿ ಭಾರತವು ವಿಶ್ವದ ಅಗ್ರ 5 ಆರ್ಥಿಕತೆಗಳಲ್ಲಿ ಸ್ಥಾನ ಪಡೆದಿದೆ ಎಂಬುದು ಎಲ್ಲರಿಗೂ ತಿಳಿದಿರುವ ವಿಷಯ. ಮುಂಬರುವ ದಿನಗಳಲ್ಲಿ ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ.

ಮೋದಿ ಮತ್ತು ಶಾ ಜೋಡಿ ಭಾರತದ ರಾಜಕೀಯಕ್ಕೆ ಹೊಸ ದಿಕ್ಕನ್ನು ನೀಡಿದ್ದಾರೆ. ಅವರು ಜಾಗತಿಕ ಮಟ್ಟದಲ್ಲಿ ದೇಶಕ್ಕೆ ಹೊಸ ಗುರುತನ್ನು ನೀಡುವುದರ ಜೊತೆಗೆ ದೇಶದ ಆರ್ಥಿಕ ಅಭಿವೃದ್ಧಿಗೆ ವೇಗ ನೀಡಿದರು. ಈ ಎಲ್ಲಾ ಕಾರಣಗಳು ಪ್ರಧಾನಿ ಮೋದಿಯವರು 2024 ರಲ್ಲಿ ಮರಳಿ ಅಧಿಕಾರಕ್ಕೆ ಬರಲಿದ್ದಾರೆ ಎಂಬುದನ್ನು ಸೂಚಿಸುತ್ತದೆ.

## ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ: ಎಚ್. ಡಿ. ದೇವೇಗೌಡ



ಬೆಂಗಳೂರು: ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಸ್ಪಷ್ಟಪಡಿಸಿದ್ದಾರೆ.

ಶನಿವಾರ ಜೆಡಿಎಸ್ ಮುಖ್ಯ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನನ್ನ ನೆನಪಿನ ಶಕ್ತಿ ಚೆನ್ನಾಗಿದ್ದರೂ ವಯಸಿನ ಕಾರಣದಿಂದಾಗಿ ಓಡಾಟ ಕಷ್ಟವಾಗಿದೆ. ಹೀಗಾಗಿ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ಬಗ್ಗೆ ಪ್ರಚಾರ ಮಾಡುವುದಾಗಿ ಹೇಳಿದರು.

ಲೋಕಸಭಾ ಚುನಾವಣೆಯಲ್ಲಿ ಕುಮಾರಸ್ವಾಮಿ ಸ್ಪರ್ಧಿಸುವ ಬಗ್ಗೆ ಇನ್ನೂ ಯಾವುದೇ ತೀರ್ಮಾನ ಕೈಗೊಂಡಿಲ್ಲ. ಪ್ರಧಾನಿ ಮೋದಿ ಒಂದು ವೇಳೆ ಹೇಳಿದರೆ ಎಲ್ಲರೂ ಸೇರಿ ಒಮ್ಮತದ ನಿರ್ಧಾರ ಕೈಗೊಳ್ಳುತ್ತೇವೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಇದುವರೆಗೂ ಸಹ ಎಚ್.ಡಿ. ಕುಮಾರಸ್ವಾಮಿಗೆ ಕೇಂದ್ರ ಸಚಿವ ಸ್ಥಾನ ನೀಡುವ ಬಗ್ಗೆ ಯಾವುದೇ ಸುಳಿವು ನೀಡಿಲ್ಲ. ಹಾಸನದಿಂದ ಪ್ರಜ್ವಲ್ ಸ್ಪರ್ಧೆ ಖಚಿತ ಎಂದು ದೇವೇಗೌಡರು ಸುಳಿವು ನೀಡಿದ್ದಾರೆ.

ರಾಮ ಮಂದಿರದ ಭೇಟಿಗೆ ಕಾಂಗ್ರಸ್ಸಿಗರು ನಿರಾಕರಿಸಿರುವ ಬಗ್ಗೆ ಮಾತನಾಡಿದ ಅವರು, ಇದು ಸಾಫ್ಟ್ ಹಿಂದುತ್ವವೋ ಹಾರ್ಡ್ ಹಿಂದುತ್ವವೋ ಗೊತ್ತಿಲ್ಲ. ಸಿದ್ದರಾಮಯ್ಯ ಅಯೋಧ್ಯೆಗೆ ಹೋಗಿ ದರ್ಶನ ಮಾಡಿಕೊಂಡು ಬರಲಿ. ನಾನೂ ಸಹ ಅಯೋಧ್ಯೆಗೆ ಭೇಟಿ ನೀಡುತ್ತಿದ್ದೇನೆ ಎಂದರು.

## ದಿವ್ಯಾ ಪಹುಜಾ ಮೃತದೇಹ ಪತ್ತೆ

ಹರಿಯಾಣ: ಜನವರಿ 2 ರಂದು ಹತ್ಯೆಯಾಗಿದ್ದ ಮಾಜಿ ಮಾಡೆಲ್ ದಿವ್ಯಾ ಪಹುಜಾ ಅವರ ಮೃತ ದೇಹವನ್ನು ಹುಡುಕುವಲ್ಲಿ ಕೊನೆಗೂ ಪೊಲೀಸ್ ಅಧಿಕಾರಿಗಳು ಯಶಸ್ವಿಯಾಗಿದ್ದಾರೆ. ಬಂಧಿತ ಓರ್ವ ಆರೋಪಿ ನೀಡಿದ ಸುಳಿವಿನ ಆಧಾರದ ಮೇಲೆ ಮೃತದೇಹವನ್ನು ಪತ್ತೆ ಮಾಡಿದ್ದಾರೆ.



ಹರಿಯಾಣದ ಕೆನಲ್ನಲ್ಲಿ ದಿವ್ಯಾ ಪಹುಜಾರ ಮೃತದೇಹ ಪತ್ತೆಯಾಗಿದೆ. ಭಂಕ್ರಾ ಕಾಲುವೆಯಲ್ಲಿ ಮೃತದೇಹವನ್ನು ಬೀಸಾಡಿ ಹೋಗಿದ್ದರು. ಮೃತದೇಹವನ್ನು ಹರಿಯಾಣದ ತೊಹ್ನಾ ಪೊಲೀಸರು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ಮುಂದಾಗಿದ್ದಾರೆ.

ಪಹುಜಾ ಕುಟುಂಬಸ್ಥರು ಮೃತದೇಹವನ್ನು ಗುರುತಿಸಿದ್ದಾರೆ. ಆರೋಪಿ ಬಾಲ್ರಾಜ್ ಗಿಲ್ನನ್ನು ಕಳೆದ ಗುರವಾರ ಪೊಲೀಸರು ಬಂಧಿಸಿದ್ದರು. ಕೊಲೆಯಾದ ಬಳಿಕ ಪ್ರಕರಣದ ಪ್ರಮುಖ ಆರೋಪಿ ಅಭಿಜಿತ್ ಸಿಂಗ್, ಮೃತದೇಹವನ್ನು ಯಾರಿಗೂ ಕಾಣದಂತೆ ಎಸೆದು ಬರುವ ಟಾಸ್ಕ್ ಅನ್ನು ಗಿಲ್ಗೆ ನೀಡಿದ್ದ. ಅಂತೆಯೇ ಗಿಲ್ ಪಂಜಾಬ್ನ ಕೆನಲ್ಗೆ ಎಸೆದು ಬಂದಿದ್ದಾನೆ ಎಂದು ತನಿಖೆಯಿಂದ ತಿಳಿದುಬಂದಿತ್ತು.

## ಲಂಚಕ್ಕೆ ಬೇಡಿಕೆ ಇಡುತ್ತಿದ್ದ 7 ಜನ ಅಧಿಕಾರಿಗಳು ಅಮಾನತು

ಬೆಂಗಳೂರು : ಬಿಎಂಟಿಸಿ ನೌಕರರ ಬಳಿ ಲಂಚಕ್ಕೆ ಬೇಡಿಕೆ ಇಡುತ್ತಿದ್ದ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಿ ಆದೇಶಿಸಲಾಗಿದೆ.

7 ಜನ ಅಧಿಕಾರಿಗಳನ್ನು ವಿಚಾರಣಾ ಇತ್ಯರ್ಥ ಪೂರ್ವ ಅಮಾನತುಗೊಳಿಸಿ ಬಿಎಂಟಿಸಿ ಬಿಎಂಟಿಸಿ ಎಂಡಿ ಆದೇಶಿಸಿದ್ದಾರೆ.

ಸಿಬ್ಬಂದಿ ಮೇಲ್ವಿಚಾರಕಿ, ಕಿರಿಯ ಸಹಾಯಕರು ಸೇರಿದಂತೆ 7 ಜನ ಅಧಿಕಾರಿಗಳು ಅಮಾನತು ಆಗಿದ್ದಾರೆ.

**ಸಸ್ಪೆಂಡ್ ಆದ ಅಧಿಕಾರಿಗಳು :**

ಸಿಬ್ಬಂದಿ ಮೇಲ್ವಿಚಾರಕಿ ಮಂಜುಳಾ. ಆರ್, ಕಿರಿಯ ಸಹಾಯಕರಾದ ಪ್ರೀತಮ್ ಹಾಗೂ ಮನೋಜ್ ಕುಮಾರ್ ಎಲ್. ಎಸ್, ಸಹಾಯಕ ಲೆಕ್ಕಿಗ ಧನಂಜಯ್. ವಿ, ಕಿರಿಯ ಸಹಾಯಕಿಯರಾದ ಸುಮ. ಎ, ಶಾಂತವ್ವ ಹಾಗೂ ಸಹಾಯಕ ಕುಶಲಕರ್ಮಿ ದೇವರಾಜ್.ಜಿ ಅಮಾನಾತಾದ ಅಧಿಕಾರಿಗಳಾಗಿದ್ದಾರೆ.

ನೌಕರರು ರಜೆ ಬೇಕು ಅಂದ್ರೆ ಈ ಅಧಿಕಾರಿಗಳಿಗೆ ಲಂಚ ಕೊಡಲೇಬೇಕಾಗಿತ್ತು. ಬೇಕಾದ ರೂಟ್, ರಜೆ, ಶಿಫ್ಟ್ ಬೇಕಾದ್ರೆ ಡಿಪೋ ಅಧಿಕಾರಿಗಳ ಜೇಬು ತುಂಬಿಸಬೇಕಿತ್ತು. ಹೀಗಾಗಿ 7 ಜನ ಅಧಿಕಾರಿಗಳ ತಲೆದಂಡವಾಗಿದೆ.

## ಬೆಳಗಾವಿ: ಕನ್ನಡ ನಾಮಫಲಕಕ್ಕೆ ಬೆಂಕಿಯಿಟ್ಟ ಶಿವಸೇನೆ ಪುಂಡರು



ಬೆಳಗಾವಿ: ಬೆಳಗಾವಿಯಲ್ಲಿ ಕನ್ನಡ ಬೋರ್ಡ್‌ಗಳ ಕಡ್ಡಾಯ ಮಾಡಿರೋದ್ರಿಂದ ಗಡಿಯಲ್ಲಿ ಶಿವಸೇನೆ ಮತ್ತೆ ಕ್ಯಾತೆ ತೆಗೆದಿದೆ.

ನಗರದಲ್ಲಿ ಕಡ್ಡಾಯ ಶೇಕಡಾ 60 ರಷ್ಟು ಕನ್ನಡ ಬೋರ್ಡ್ ಅಳವಡಿಸುವಂತೆ ಪಾಲಿಕೆ ಆದೇಶ ನೀಡಿದೆ.

ಹೀಗಾಗಿ ಪಾಲಿಕೆ ಹಾಗೂ ಸರ್ಕಾರದ ಆದೇಶದ ವಿರುದ್ಧ ಗಡಿಯಲ್ಲಿ ಶಿವಸೇವೆ ಪುಂಡರು ಕನ್ನಡ ನಾಮಫಲಕಕ್ಕೆ ಬೆಂಕಿ ಹಚ್ಚಿದ್ದಾರೆ. ಕನ್ನೇರಿ ಮಠದಲ್ಲಿ ಹಾಕಿದ್ದ ಕನ್ನಡ ಬೋರ್ಡ್‌ಗಳನ್ನ ಹರಿದು ಬೆಂಕಿ ಹಚ್ಚಿ ಶಿವಸೇನೆ ಎಂಇಎಸ್ ಕಾರ್ಯಕರ್ತರು ಪುಂಡಾಟ ಮೆರೆದಿದ್ದಾರೆ.

ನಾಮಫಲಕದಲ್ಲಿ ಕನ್ನಡ ಕಡ್ಡಾಯ ಜೊತೆಗೆ ಬೆಳಗಾವಿ ಅಂತಾ ಬಳಸಲು ಆಯುಕ್ತ ಅಶೋಕ ದುಡಗುಂಟಿ ಯಿಂದ ಆದೇಶ ನೀಡಿದ್ದಾರೆ.

ಬೆಲಗಾಂವ, ಬೆಳಗಾಮ್ ಅಂತಾ ಬರೆದಿರೋ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಲಾಗಿದೆ. ಹೀಗಿದ್ದೂ ಬೆಳಗಾವಿ ಎಂದು ಬಳಸಲು ಹಿಂದೇಟು ಹಾಕುತ್ತಿದ್ದಾರೆ.

ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಲು 2 ಸಾವಿರ ಅಂಗಡಿಗಳಿಗೆ ನೋಟಿಸ್ ನೀಡಲಾಗಿದೆ. ಆದೇಶ ಪಾಲಿಸದವರ ಅಂಗಡಿ ಲೈಸನ್ಸ್ ರದ್ದು ಮಾಡುವ ಎಚ್ಚರಿಕೆ ಕೊಡಲಾಗಿದೆ.

## ಆರೋಪಿ ಬಾಲಾಪರಾಧಿಯಾಗಿದ್ದರೆ ಮಾನಸಿಕ ಆರೋಗ್ಯ ಸ್ಥಿತಿ ಪರೀಕ್ಷಿಸಿ: ಹೈಕೋರ್ಟ್

ಬೆಂಗಳೂರು: ಕ್ರಿಮಿನಲ್ ಮೊಕದ್ದಮೆಯಲ್ಲಿ ಮೊದಲ ಬಾರಿಗೆ ಆರೋಪಿಯನ್ನು ಹಾಜರುಪಡಿಸಿದಾಗ ಮ್ಯಾಜಿಸ್ಟ್ರೇಟ್ ಅಥವಾ ವಿಶೇಷ ನ್ಯಾಯಾಲಯಗಳು ಆರೋಪಿಯ ಕೆಲವು ಪ್ರಾಥಮಿಕ ವಿಚಾರಣೆಗಳನ್ನು ಮಾಡಬೇಕು ಎಂದು ಹೈಕೋರ್ಟ್ ಹೇಳಿದೆ.



ಒಂದು ವೇಳೆ ಆರೋಪಿಯು ಬಾಲಾಪರಾಧಿಯಾಗಿದ್ದು, ಮಾನಸಿಕವಾಗಿ ಸದೃಢನಾಗಿದ್ದಾನೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಕಾನೂನಿನ ಇತರ ಅವಶ್ಯಕತೆಗಳಂತಹ ಪ್ರಮುಖ ವಿಷಯಗಳನ್ನು ಸ್ಪಷ್ಟಪಡಿಸಿಕೊಳ್ಳಬೇಕು, ಇದು ಕೇವಲ ಔಪಚಾರಿಕವಾಗಿರಬಾರದು ಎಂದು ಕರ್ನಾಟಕ ಹೈಕೋರ್ಟ್ ಅಭಿಪ್ರಾಯ ಪಟ್ಟಿದೆ.

ಮ್ಯಾಜಿಸ್ಟ್ರೇಟ್/ವಿಶೇಷ ನ್ಯಾಯಾಲಯಗಳಿಗೆ ಜಸ್ಟಿಸ್ ಸಿ ಎಂ ಜೋಶಿ ಈ ಸಂಬಂಧ ನಿರ್ದೇಶನ ನೀಡಿದ್ದಾರೆ, ಆರೋಪಿ ಅಪ್ರಾಪ್ತ ಬಾಲಕ ಎಂದು ಖಚಿತಪಡಿಸಿಕೊಳ್ಳದೆ ವಿಶೇಷ ನ್ಯಾಯಾಲಯವು 20 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿತ್ತು. ಆರೋಪಿ ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದಲ್ಲಿ ಹೈಕೋರ್ಟ್‌ನಿಂದ ಜಾಮೀನು ಪಡೆಯುವವರೆಗೆ ಮೂರು ವರ್ಷಗಳ ಗರಿಷ್ಠ ಶಿಕ್ಷೆಯೊಂದಿಗೆ ಜುವೆನೈಲ್ ಹೋಮ್‌ನಲ್ಲಿ ಇರಿಸಬೇಕಾಗಿತ್ತು, ಆದರೆ ಮೂರು ವರ್ಷ ಮತ್ತು ಮೂರು ತಿಂಗಳು ಜೈಲಿನಲ್ಲಿ ಇರಿಸಲಾಗಿತ್ತು.

ಆತ ಅಪರಾಧಿಯಾಗಲಿ, ಇಲ್ಲದಿರಲಿ ಆತನನ್ನು ಅಪ್ರಾಪ್ತನಂತೆ ಪರಿಗಣಿಸಬೇಕು ಎಂದು ತಿಳಿಸಿದ ನ್ಯಾಯಮೂರ್ತಿ ಜೋಶಿ, ಬೀದರ್ ಜಿಲ್ಲೆಯ 24 ವರ್ಷದ ಯುವಕ ಸಲ್ಲಿಸಿದ್ದ ಮೇಲ್ಮನವಿಯನ್ನು ಪುರಸ್ಕರಿಸಿ ಈ ಆದೇಶ ನೀಡಿದ್ದಾರೆ.

# ಲೋಕಸಭೆಗೆ ಸಚಿವರ ಸ್ಪರ್ಧೆ: ಇಬ್ಬರು ಮಂತ್ರಿಗಳಿಗೆ ರಾಜ್ಯ ರಾಜಕಾರಣದಲ್ಲೇ ಮುಂದುವರಿಯಲು ಹೈಕಮಾಂಡ್ ಸೂಚನೆ

ಬೆಂಗಳೂರು: ರಾಜ್ಯ ಕಾಂಗ್ರೆಸ್ ನಲ್ಲಿ ಸಚಿವರನ್ನ ಕಣಕ್ಕಿಳಿಸುವುದರ ಕುರಿತು ಕಾಂಗ್ರೆಸ್ ಹೈಕಮಾಂಡ್ ಚಿಂತನೆ ನಡೆಸಿದೆ. ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನಗಳನ್ನ ಗೆಲ್ಲುವ ನಿಟ್ಟಿನಲ್ಲಿ ವರ್ಚಸ್ಸಿರುವ ಸಚಿವರನ್ನ ಕಣಕ್ಕಿಳಿಸಲು ಹೈಕಮಾಂಡ್ ನಿರ್ಧರಿಸಿದ್ದು, ಇಬ್ಬರು ಸಚಿವರಿಗೆ ರಾಜ್ಯ ರಾಜಕಾರಣದಲ್ಲೇ ಮುಂದುವರೆಯುವಂತೆ ಹೈಕಮಾಂಡ್ ಸೂಚನೆ ನೀಡಿದೆ.

ರಾಜ್ಯದಲ್ಲಿ ಹಿರಿಯ ಸಚಿವರನ್ನ ಲೋಕಸಭೆ ಚುನಾವಣೆಗೆ ಕಣಕ್ಕಿಳಿಸುವ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್ ವಿಭಿನ್ನ ನಿಲುವು ತಾಳಿದೆ. ರಾಜ್ಯದಲ್ಲಿ 8 ಸಚಿವರನ್ನ ಚುನಾವಣೆ ಕಣಕ್ಕಿಳಿಸುವ ಬಗ್ಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರು ಎಐಸಿಸಿಗೆ ಸರ್ವೇ ರಿಪೋರ್ಟ್ ಸಲ್ಲಿಸಿದ್ದರು. ಮೊನ್ನೆಯಷ್ಟೇ ರಾಜ್ಯಕ್ಕೆ ಆಗಮಿಸಿದ್ದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರ ಜೊತೆ ಈ ಬಗ್ಗೆ ಆಪ್ತವಾಗಿ ಚರ್ಚೆ ಕೂಡ ನಡೆಸಿದ್ದರು.



ಈ ನಿಟ್ಟಿನಲ್ಲಿ ಬಹುತೇಕ ಸಚಿವರು ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನ ಭೇಟಿ ಮಾಡಿ ಲೋಕಸಭೆ ಸ್ಪರ್ಧೆಗೆ ನಿರಾಸಕ್ತಿ ವ್ಯಕ್ತಪಡಿಸಿದ್ದರು. ಪಕ್ಷ ಹೇಳಿದರೆ ಸ್ಪರ್ಧೆ ಮಾಡಬೇಕಾಗುತ್ತೆದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಚಿವರಿಗೆ ಸ್ಪಷ್ಟವಾಗಿ ಹೇಳಿ ಕಳಿಸಿದ್ದರು.

ಇದೀಗ ದೆಹಲಿಯಲ್ಲಿ ನಡೆದ ಸಭೆಯಲ್ಲಿ ಹೈಕಮಾಂಡ್ ವಿಭಿನ್ನ ನಿಲುವನ್ನ ತಳೆದಿದ್ದು, ಸಚಿವರ ಲೋಕಸಭೆ ಸ್ಪರ್ಧೆಯ ವಿಚಾರವನ್ನ ಆಡಳಿತಾತ್ಮಕ ದೃಷ್ಟಿಯಿಂದ ಚರ್ಚೆ ನಡೆಸಿದೆ. ವಿಶೇಷವಾಗಿ ಆರೋಗ್ಯ ಇಲಾಖೆ ಸಚಿವ ದಿನೇಶ್ ಗುಂಡೂರಾವ್, ಹಾಗೂ ಕಂದಾಯ ಇಲಾಖೆ ಸಚಿವ ಕೃಷ್ಣಬೈರೇಗೌಡರನ್ನ ರಾಜ್ಯ ರಾಜಕಾರಣದಲ್ಲೇ ಮುಂದುವರಿಸಿಸಲು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಿದೆ.

ಆರೋಗ್ಯ ಇಲಾಖೆ ಹಾಗೂ ಕಂದಾಯ ಇಲಾಖೆ ಕಾರ್ಯವೈಖರಿ ಉತ್ತಮವಾಗಿದೆ. ಎರಡು ಮಹತ್ವದ ಇಲಾಖೆಗಳಾಗಿದ್ದು, ಇಬ್ಬರು ಸಚಿವರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಲೋಕಸಭೆಗೆ ಕಣಕ್ಕಿಳಿಸಿ ಅನಗತ್ಯ ಗೊಂದಲ ಸೃಷ್ಟಿ ಬೇಡ ಎಂಬ ತೀರ್ಮಾನಕ್ಕೆ ಬರಲಾಗಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಈ ಕುರಿತಂತೆ ದೆಹಲಿಯಲ್ಲಿ ದಿನೇಶ್ ಗುಂಡೂರಾವ್, ಹಾಗೂ ಕೃಷ್ಣಬೈರೇಗೌಡರ ಜೊತೆ ಚರ್ಚೆ ನಡೆಸಿರುವ ಹೈಕಮಾಂಡ್ ನಾಯಕರು, ರಾಜ್ಯ ರಾಜಕಾರಣದಲ್ಲೇ ಮುಂದುವರಿಯುಂತೆ ಸಲಹೆ ನೀಡಿದ್ದಾರೆ. ಪ್ರಮುಖ ಖಾತೆ ಹೊಂದಿರುವ ಎಲ್ಲ ಸಚಿವರನ್ನ ಲೋಕಸಭೆಗೆ ಕಣಕ್ಕಿಳಿಸಿದರೆ ಆಡಳಿತಾತ್ಮಕವಾಗಿ ಸಮಸ್ಯೆಯಾಗಬಹುದು. 6 ತಿಂಗಳಿಗೆ ಸಚಿವರೆಲ್ಲ ಇಲಾಖೆ ಕಾರ್ಯ ಬಿಟ್ಟು ಚುನಾವಣೆಯಲ್ಲಿ ಧುಮುಕಿದರೆ ಜನರು ಸರ್ಕಾರದ ಬಗ್ಗೆ ಬೇರೆ ರೀತಿಯ ವ್ಯಾಖ್ಯಾನ ಮಾಡಬಹುದು. ಅಲ್ಲದೇ ಕೋವಿಡ್ ಉಲ್ಬಣಗೊಂಡರೆ, ಪ್ರತಿಪಕ್ಷಗಳಿಗೆ ಆಹಾರವಾಗಬೇಕಾಗುತ್ತೆ. ಹೀಗಾಗಿ ಜವಾಬ್ದಾರಿಯುತವಾಗಿ ಇಲಾಖೆ ಆಡಳಿತದ ಕಡೆ ಹೆಚ್ಚು ಗಮನ ಹರಿಸುವುದರೊಂದಿಗೆ, ಚುನಾವಣೆಗೆ ಸಹಾಕರ ನೀಡುವಂತೆ ಗುಂಡೂರಾವ್, ಹಾಗೂ ಕೃಷ್ಣಬೈರೇಗೌಡರಿಗೆ ಎಐಸಿಸಿ ನಾಯಕರು ಸೂಚಿಸಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಲೋಕಸಭೆಗೆ ಕಣಕ್ಕಿಳಿಸುವ ಎಂಟು ಸಚಿವರ ಪಟ್ಟಿಯಿಂದ ಇಬ್ಬರು ಪ್ರಮುಖ ಖಾತೆಯ ಸಚಿವರನ್ನ ಕೈಬಿಟ್ಟಿರುವ ಕಾಂಗ್ರೆಸ್ ಹೈಕಮಾಂಡ್, ತುಮಕೂರು ಕ್ಷೇತ್ರದಲ್ಲೂ ಕೆ.ಎನ್ ರಾಜಣ್ಣ ಕಣಕ್ಕಿಳಿಸುವ ಬದಲು ಮುದ್ದಹನುಮೇಗೌಡರನ್ನ ಪಕ್ಷಕ್ಕೆ ಸೇರಿಸಿಕೊಂಡು ಕಣಕ್ಕಿಳಿಸುವ ಬಗ್ಗೆ ಚರ್ಚಿಸಿದೆ ಎಂದು ಹೇಳಲಾಗಿದೆ.

# ವಿದ್ಯಾರ್ಥಿಗಳ ಜತೆ ಶಾಸಕ ಲಕ್ಷ್ಮಣ ಸವದಿ ಸಂವಾದ



ಅಥಣಿ: ಶಾಸಕ ಲಕ್ಷ್ಮಣ ಸವದಿಯವರೊಂದಿಗೆ ಅವರ ನಿವಾಸದಲ್ಲಿ ಬೆಳಗ್ಗೆ ಅಥಣಿ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಯ 10ನೇ ತರಗತಿ ವಿದ್ಯಾರ್ಥಿಗಳಿಂದ ಸಂವಾದ ಕಾರ್ಯಕ್ರಮ ಜರುಗಿತು.

ವಿದ್ಯಾರ್ಥಿಗಳು ಪ್ರಸ್ತುತ ರಾಜಕೀಯ ವಿದ್ಯಮಾನಗಳು, ಹಿಂದಿನ ಶಿಕ್ಷಣ ಪದ್ಧತಿ ಇಂದಿನ ಶಿಕ್ಷಣ ಪದ್ಧತಿಯಲ್ಲಿನ ವ್ಯತ್ಯಾಸ, ಶಿಕ್ಷಣ ಕಲಿಕೆಗೆ ಸರ್ಕಾರದಿಂದ ಬಡ ವಿದ್ಯಾರ್ಥಿಗಳಿಗಿರುವ ಸರ್ಕಾರದ ಸವಲತ್ತುಗಳು, ವಿಧಾನಸಭೆ, ವಿಧಾನ ಪರಿಷತನ್ ಕಾರ್ಯ ಕಲಾಪಗಳು ಹೇಗೆ ನಡೆಯುತ್ತವೆ? ಅವಿಶ್ವಾಸ ಗೊತ್ತುವಳಿ ನಿರ್ಣಯವೆಂದರೇನು? ಶಾಸಕರ ಕಾರ್ಯಗಳು ಮತ್ತು ಅವರ ಜವಾಬ್ದಾರಿಗಳು, ಸರ್ಕಾರದಿಂದ ಶಾಸಕರಿಗೆ ಸಿಗುವ ವೇತನ, ಸೌಲಭ್ಯಗಳು, ಅಥಣಿ ತಾಲೂಕಿನಲ್ಲಿ ವಿದ್ಯಾರ್ಥಿಗಳು ಎದುರಿಸುತ್ತಿರುವ ಶೈಕ್ಷಣಿಕ ಸಮಸ್ಯೆಗಳು ಹಾಗೂ ಮುಂದೆ ಶೈಕ್ಷಣಿಕ ಕ್ಷೇತ್ರದಲ್ಲಿ ಕೈಗೊಳ್ಳಬೇಕಾದ ಸುಧಾರಣೆ ಕಾರ್ಯಗಳು, ಅಥಣಿ ಮತಕ್ಷೇತ್ರವನ್ನು ಅಭಿವೃದ್ಧಿಯ ಮೂಲಕ ರಾಜ್ಯದಲ್ಲಿಯೇ ಮಾದರಿಯಾಗಿಸುವಲ್ಲಿ ಶಾಸಕರಾದ ಲಕ್ಷ್ಮಣ ಸವದಿಯವರ ಕನಸುಗಳೇನು? ಹೀಗೆ ಹಲವಾರು ವಿದ್ಯಾರ್ಥಿಗಳು ಕೇಳಿದ ಹತ್ತಾರು ಪ್ರಶ್ನೆಗಳಿಗೆ ಶಾಸಕರು ಸವಿಸ್ತಾರವಾಗಿ ಉತ್ತರಿಸುವ ಮೂಲಕ ವಿದ್ಯಾರ್ಥಿಗಳ ಮನಮುಟ್ಟಿದರು.

ವಿದ್ಯಾರ್ಥಿಗಳಿಗೆ ಶಾಲಾ ಪಠ್ಯ ಶಿಕ್ಷಣದೊಂದಿಗೆ ಸಂಸ್ಕಾರಯುತ ಶಿಕ್ಷಣ ಮುಖ್ಯವಾಗಿದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು. ಶಿಕ್ಷಣದಲ್ಲಿ 10ನೇ ತರಗತಿ ಹಾಗೂ 12ನೇ ತರಗತಿ ಮಕ್ಕಳಿಗೆ ಮುಖ್ಯ ಘಟ್ಟ. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಚೆನ್ನಾಗಿ ವಿದ್ಯಾಭ್ಯಾಸ ಮಾಡಿ ಉನ್ನತ ದರ್ಜೆಯಲ್ಲಿ ತೇರ್ಗಡೆಯಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಈ ಮೂಲಕ ತಂದೆ, ತಾಯಿ ಹಾಗೂ ಶಿಕ್ಷಕರ ಕೀರ್ತಿ ಹೆಚ್ಚಿಸಬೇಕು ಎಂದು ಕಿವಿಮಾತು ಹೇಳಿದರು. ಶಾಸಕರ ಮಾತುಗಳು ನಮಗೆ ಪ್ರೇರಣೆ ಹಾಗೂ ಮಾತನಾಡಲು ಧೈರ್ಯ ಮೂಡಿಸಿತು ಎಂದು ವಿದ್ಯಾರ್ಥಿಗಳು ಸಂತಸ ವ್ಯಕ್ತಪಡಿಸಿದರು.

ಸಂವಾದದಲ್ಲಿ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಸುನಿಲ ಶಿವಣಗಿ, ಉಪಾಧ್ಯಕ್ಷರಾದ ಅಶೋಕ ಬುರ್ಲಿ, ಕಾರ್ಯದರ್ಶಿ ವಿಜಯಕುಮಾರ ಬುರ್ಲಿ, ಸದಸ್ಯರಾದ ಶಿವಣ್ಣ ಹಂಜಿ, ಪ್ರಕಾಶ ಮಹಾಜನ, ಶ್ರೀಶೈಲ ಸಂಕ, ಆಡಳಿತ ಅಧಿಕಾರಿ ಪ್ರತಿಭಾ ನಾಯಕ, ಹನಮಂತ ಗುಡೋಡಗಿ, ಮುಖ್ಯ ಶಿಕ್ಷಕರಾದ ಎಂ.ಬಿ. ಬಿರಾದರ, ಎಂ.ಎಸ್. ದೇಸಾಯಿ ಸೇರಿದಂತೆ ಶಿಕ್ಷಕರು ಉಪಸ್ಥಿತರಿದ್ದರು.

# ವನ್ಯಜೀವಿ ವಸ್ತುಗಳನ್ನು ಹಿಂದಿರುಗಿಸುವ ಸರ್ಕಾರದ ಆದೇಶಕ್ಕೆ ಪರಿಸರವಾದಿಗಳ ವಿರೋಧ'

ಬೆಂಗಳೂರು: ಜನರು ತಮ್ಮಲ್ಲಿರುವ ವನ್ಯಜೀವಿ ಸಾಮಾಗ್ರಿಗಳನ್ನು ಒಪ್ಪಿಸುವಂತೆ ರಾಜ್ಯ ಸರ್ಕಾರದ ಆದೇಶಕ್ಕೆ ಸಾಮಾಜಿಕ ಹೋರಾಟಗಾರರು ಮತ್ತು ಪರಿಸರವಾದಿಗಳು ತೀವ್ರ ವಿರೋಧ ವ್ಯಕ್ತ ಪಡಿಸಿದ್ದಾರೆ.



ಈ ಸಂಬಂಧ ಕರ್ನಾಟಕ ಅರಣ್ಯ ಇಲಾಖೆಯ ಮುಖ್ಯ ವನ್ಯಜೀವಿ ವಾರ್ಡನ್ ಮತ್ತು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅವರಿಗೆ ಪತ್ರ ಬರೆದಿದ್ದಾರೆ. ಉದ್ದೇಶಿತ ಕ್ಷಮಾದಾನದ ಕಾನೂನು ಅಂಶವನ್ನು ಸೂಚಿಸಿದ್ದಾರೆ.

1720/2023 ರಲ್ಲಿನ ಇತ್ತೀಚಿನ ಸುಪ್ರೀಂ ಕೋರ್ಟ್ ತೀರ್ಪು (ಖಐಕ ಸಂಖ್ಯೆ . 15232/2020) ಪ್ರಕಾರ, ಪ್ರಾಣಿಗಳ ವಸ್ತುಗಳು ಮತ್ತು ಟ್ರೋಫಿಗಳನ್ನು ಒಪ್ಪಿಸುವ ಉದ್ದೇಶಿತ ಕ್ಷಮಾದಾನ ಯೋಜನೆಯು ಕಾನೂನಿಗೆ ಅನುಸಾರವಾಗಿರಬಾರದು ಎಂದು ಜನವರಿ 11, 2024 ರಂದು ಬರೆದ ಪತ್ರದಲ್ಲಿ ವೈಲ್ಡ್‌ಲೈಫ್ ಫಸ್ಟ್‌ನ ಟ್ರಸ್ಟಿ ಪ್ರವೀಣ್ ಭಾರ್ಗವ್ ಹೇಳಿದ್ದಾರೆ. ತೀರ್ಪಿನ ಪ್ರಕಾರ, ಕೇಂದ್ರ ಸರ್ಕಾರವು ರೂಪಿಸಿದ ವನ್ಯಜೀವಿ ಸ್ಟಾಕ್ ನಿಯಮಗಳು, ಘೋಷಣೆಯ ಅವಧಿಯು 2003 ರಲ್ಲಿ ಮುಗಿದಿದೆ. ಇದು 1973 ರಲ್ಲಿ ರಾಜ್ಯ ಸರ್ಕಾರವು ಈ ನಿಟ್ಟಿನಲ್ಲಿ ರೂಪಿಸಿದ ಯಾವುದೇ ನಿಯಮವನ್ನು ಊರ್ಜಿತಗೊಳಿಸುವುದಿಲ್ಲ. 2022 ರಲ್ಲಿನ ಇತ್ತೀಚಿನ ತಿದ್ದುಪಡಿಗಳು ಯಾವುದೇ ಪ್ರಾಣಿಯ ವಸ್ತು ಅಥವಾ ಟ್ರೋಫಿಯನ್ನು ವಾಸಪ್ ಮಾಡಲು ಯಾವುದೇ ಹೊಸ ಅವಕಾಶವನ್ನು ಒದಗಿಸಿಲ್ಲ. ವ್ಯತಿರಿಕ್ತವಾಗಿ, ವನ್ಯಜೀವಿ ಸಂರಕ್ಷಣಾ ಕಾಯಿದೆಯಲ್ಲಿ ಹೊಸದಾಗಿ ಸೇರಿಸಲಾದ ಸೆಕ್ಷನ್ 42೦ ಕೇವಲ ಮಾಲೀಕತ್ವದ ಪ್ರಮಾಣಪತ್ರದ ಅಡಿಯಲ್ಲಿ ಕಾನೂನುಬದ್ಧವಾಗಿ ಹೊಂದಿರುವ ಪ್ರಾಣಿಗಳ ಲೇಖನಗಳು ಅಥವಾ ಟ್ರೋಫಿಗಳನ್ನು ಒಪ್ಪಿಸಲು ಮಾತ್ರ ಒದಗಿಸುತ್ತದೆ. ಹೀಗಾಗಿ, ಮಾಲೀಕತ್ವದ ಪ್ರಮಾಣಪತ್ರ ಇಲ್ಲದವರಿಗೆ ಶರಣಾಗತಿಗೆ ಅನುಕೂಲವಾಗುವಂತೆ ಅವಕಾಶ ಕಲ್ಪಿಸುವುದು ಸಂಸತ್ತಿನ ಉದ್ದೇಶವಾಗಿರಲಿಲ್ಲ ಎಂಬುದು ಸ್ಪಷ್ಟವಾಗಿದೆ' ಎಂದು ಹೇಳಿದರು.

ಒಂದು ಕಾನೂನನ್ನು ಒಟ್ಟಾರೆಯಾಗಿ ಸನ್ನಿವೇಶದಲ್ಲಿ ಓದಬೇಕು ಮತ್ತು ಕೇವಲ ವೈಯಕ್ತಿಕ ನಿಬಂಧನೆಯನ್ನು ಆಧರಿಸಿಲ್ಲ ಎಂದು ಪತ್ರದಲ್ಲಿ ಸೂಚಿಸಿದೆ. ಇದಕ್ಕೆ ಸೆಕ್ಷನ್ 39(2) ನಂತಹ ಇತರ ನಿಬಂಧನೆಗಳು ಅನ್ವಯಿಸುತ್ತವೆ, ಯಾವುದೇ ವ್ಯಕ್ತಿಯು 48 ಗಂಟೆಗಳ ಒಳಗೆ ಹತ್ತಿರದ ಪೊಲೀಸ್ ಠಾಣೆ ಅಥವಾ ಅಧಿಕೃತ ಅಧಿಕಾರಿಗೆ ವರದಿ ಮಾಡಬೇಕು ಎಂದು ಈ ನಿಯಮ ಹೇಳುತ್ತದೆ. ಮುಖ್ಯ ವನ್ಯಜೀವಿ ವಾರ್ಡನ್ ಅಥವಾ ಅಧಿಕೃತ ಅಧಿಕಾರಿಯ ಹಿಂದಿನ ಅನುಮತಿಯಿಲ್ಲದೆ ಯಾವುದೇ ವ್ಯಕ್ತಿಯು ಸರ್ಕಾರಿ ಆಸ್ತಿಯನ್ನು ಸ್ವಾಧೀನಪಡಿಸಿಕೊಳ್ಳಬಾರದು ಅಥವಾ ಇಟ್ಟುಕೊಳ್ಳಬಾರದು ಎಂದು ಸೆಕ್ಷನ್ 39(3) ವಿವರಿಸುತ್ತದೆ. ವನ್ಯಜೀವಿಗಳ ಸಾಗಣೆಯ ನಿರ್ಬಂಧವನ್ನು ವಿಧಿಸುವ ವಿಭಾಗ 48೦, ಮತ್ತು ಸೆಕ್ಷನ್ 49 ಇದು ಯಾವುದೇ ಕಾಡು ಪ್ರಾಣಿಯ ವಸ್ತುಗಳು ಅಥವಾ ಟ್ರೋಫಿಯನ್ನು ಸ್ವೀಕರಿಸುವುದನ್ನು ಅಥವಾ ಸ್ವಾಧೀನಪಡಿಸಿಕೊಳ್ಳುವುದನ್ನು ನಿಷೇಧಿಸುತ್ತದೆ ಎಂದು ಹೇಳಿದ್ದಾರೆ.

ನಿಯಮಗಳು, ಮಾರ್ಗಸೂಚಿಗಳು ಅಥವಾ ಆದೇಶಗಳು ಕಾನೂನನ್ನು ಮೀರಿರಬಾರದು ಮತ್ತು ಹಾಗಿದ್ದಲ್ಲಿ, ಆ ಮಟ್ಟಿಗೆ ಅವು ಅನೂರ್ಜಿತವಾಗಿರುತ್ತವೆ. ಕಾನೂನು ಸ್ಥಾನ ಮತ್ತು ನ್ಯಾಯಾಲಯದ ಆದೇಶದ ದೃಷ್ಟಿಯಿಂದ, ಸರ್ಕಾರ ಮತ್ತು ಇಲಾಖೆಯು ಸ್ವತಂತ್ರ ಕಾನೂನು ತಜ್ಞರನ್ನು ಒಳಗೊಂಡಿರುವ ಸಮರ್ಥ ಸಮಿತಿಯಿಂದ ವಿಷಯವನ್ನು ಪರಿಶೀಲಿಸಬೇಕು, ಏಕೆಂದರೆ ಅಂತಹ ಶರಣಾಗತಿಯನ್ನು ಸಕ್ರಿಯಗೊಳಿಸುವುದರಿಂದ ವನ್ಯಜೀವಿ ಸಂರಕ್ಷಣೆಗೆ ವ್ಯಾಪಕ ಪರಿಣಾಮ ಬೀರುತ್ತದೆ ಎಂದು ಭಾರ್ಗವ್ ಹೇಳಿದರು.

# 2023 ರಲ್ಲಿ ಕೆಂಪೇಗೌಡ ವಿಮಾನ ನಿಲ್ದಾಣ ಪ್ರಯಾಣಿಕರ ಸಂಖ್ಯೆ 37.2 ಮಿಲಿಯನ್

ಬೆಂಗಳೂರು: 2023 ರಲ್ಲಿ(ಜನವರಿ–ಡಿಸೆಂಬರ್) ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ(ಕೆಐಎ)ದಿಂದೆ 37.2 ಮಿಲಿಯನ್ ಪ್ರಯಾಣಿಕರು ಪ್ರಯಾಣಿಸಿದದು, ಇದು 2022 ಕ್ಕಿಂತ ಶೇ. 35.3 ರಷ್ಟು ಹೆಚ್ಚಳವಾಗಿದೆ.

ಇನ್ನು ಸರಕು ಸಾಗಣೆಯಲ್ಲೂ ಮುಂದಿರುವ ಬೆಂಗಳೂರು ವಿಮಾನ ನಿಲ್ದಾಣ 2023 ರಲ್ಲಿ 53,751 ಮೆಟ್ರಿಕ್ ಟನ್‌ನೊಂದಿಗೆ ಸತತ ಮೂರನೇ ವರ್ಷವೂ ಬಿಎಲ್ ಆರ್ ಕಾರ್ಗೋ ವಿಭಾಗ ಮೊದಲ ಸ್ಥಾನದಲ್ಲಿದೆ.

"2023 ರಲ್ಲಿ ಬೆಂಗಳೂರು ವಿಮಾನ ನಿಲ್ದಾಣದಿಂದ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಲ್ಲಿ ಗಣನೀಯ ಏರಿಕೆಯಾಗಿದ್ದು, ಒಟ್ಟು 37.2 ಮಿಲಿಯನ್ ಪ್ರಯಾಣಿಕರನ್ನು ಸ್ವಾಗತಿಸಿದೆ. ಅದರಲ್ಲಿ 32.7 ಮಿಲಿಯನ್ ದೇಶೀಯ ಪ್ರಯಾಣಿಕರು ಮತ್ತು 4.5 ಮಿಲಿಯನ್ ಅಂತರಾಷ್ಟ್ರೀಯ ಸ್ಥಳಗಳಿಗೆ ಪ್ರಯಾಣಿಸಿದ್ದಾರೆ" ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಇನ್ನು ಏಪ್ರಿಲ್ 29, 2023 ರ ಒಂದೇ ದಿನ 1 ಲಕ್ಷ 16 ಸಾವಿರದ 688 ಜನ ಪ್ರಯಾಣಿಕರು ಕೆಂಪೇಗೌಡ ಏರ್ಪೋರ್ಟ್ ನಿಂದ ಪ್ರಯಾಣಿಸುವ ಮೂಲಕ ಹೊಸ ದಾಖಲೆ ಬರೆದಿದ್ದಾರೆ.

ದುಬೈ, ಸಿಂಗಾಪುರ್ ಮತ್ತು ದೋಹಾ ಅಂತರಾಷ್ಟ್ರೀಯ ಪ್ರಯಾಣಿಕರು ಆಯ್ಕೆಮಾಡಿದ ಪ್ರಮುಖ ಸ್ಥಳಗಳಾಗಿದ್ದು, ದೆಹಲಿ, ಮುಂಬೈ ಮತ್ತು ಹೈದರಾಬಾದ್ ಪ್ರಮುಖ ದೇಶೀಯ ಮಾರ್ಗಗಳಾಗಿವೆ.

# ಬಾಬ್ರಿ ಮಸೀದಿಯಂತೆ ಭಟ್ಕಳದ ಚಿನ್ನದ ಪಳ್ಳಿಯೂ ನಾಶ; ಸಿದ್ದರಾಮಯ್ಯಗೆ ಏಕವಚನದಲ್ಲಿ ಅನಂತಕುಮಾರ್ ಹೆಗಡೆ ನಿಂದನೆ

ಕುಮಟಾ: ಅಯೋಧ್ಯೆಯಲ್ಲಿನ ಬಾಬ್ರಿ ಮಸೀದಿಯಂತೆ ಭಟ್ಕಳದ ಚಿನ್ನದ ಪಳ್ಳಿಯೂ ನಾಶವಾಗಲಿದೆ ಎಂದು ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠೆಗೆ ಕೆಲವೇ ದಿನ ಬಾಕಿ ಇರುವ ಬೆನ್ನಲ್ಲೇ ಉತ್ತರ ಕನ್ನಡ ಜಿಲ್ಲೆಯ ಕುಮಟಾದಲ್ಲಿ ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಕುಮಟಾದಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅನಂತಕುಮಾರ್ ಹೆಗಡೆ, ಬಾಬ್ರಿ ಮಸೀದಿ ನಿರ್ನಾಮವಾದಂತೆ ಭಟ್ಕಳದ ಚಿನ್ನದ ಪಳ್ಳಿಯೂ ಆಗಲಿದೆ. ಇದನ್ನು ಬೇಕಾದರೆ ಬೆದರಿಕೆ ಅಂತ ಬೇಕಾದರೂ ತಿಳಿಯಿರಿ. ಇದು ಹಿಂದೂ ಸಮಾಜದ ತೀರ್ಮಾನವೇ ವಿನಃ ಅನಂತಕುಮಾರ್ ಹೆಗಡೆ ತೀರ್ಮಾನ ಅಲ್ಲ. ಸಿರಸಿಯ ಸಿಪಿ ಬಜಾರ್ನಲ್ಲಿಯೂ ಮಸೀದಿ ಇದೆ. ಅದು ಈ ಹಿಂದೆ ವಿಜಯ ವಿಠ್ಠಲ ದೇವಸ್ಥಾನ ಆಗಿತ್ತು. ಶ್ರೀರಂಗಪಟ್ಟಣದಲ್ಲಿರುವ ದೊಡ್ಡ ಮಸೀದಿ ಮಾರುತಿ ದೇವಸ್ಥಾನವಾಗಿತ್ತು. ಇವತ್ತೂ ಅಲ್ಲಿಗೆ ಹೋದರೆ ಮಾರುತಿ ದೇವಸ್ತಾನ ಕಾಣುತ್ತದೆ ಎಂದು ಅನಂತಕುಮಾರ್ ಹೇಳಿದರು.



ಶತಮಾನಗಳಿಂದಲೂ ಹಿಂದೂ ಸಮಾಜವನ್ನು ಒಡೆಯುತ್ತಲೆ ಬರುತ್ತದ್ದಾರೆ. ಕಾಂಗ್ರೆಸ್ ನಮ್ಮ ವಿರೋಧಿ ಅಲ್ಲ. ಅದು ಹಿಂದೂ ವಿರೋಧಿಗಳು, ಸನಾತನ ಧರ್ಮ ವಿರೋಧಿಗಳು. ಕಾಂಗ್ರೆಸ್ ನಮ್ಮ ವಿರೋಧಿ ಅಲ್ಲ, ಸಿಎಂ ಸಿದ್ದರಾಮಯ್ಯ ನಮ್ಮ ವಿರೋಧಿ. ಅಲ್ಪಸಂಖ್ಯಾತರ ಮತಕ್ಕಾಗಿ ಹರಾಜಾಗಿ ಹೊದವರು ನಮ್ಮ ವಿರೋಧಿಗಳು ಎಂದು ಅನಂತಕುಮಾರ್ ಹೆಗಡೆ ಆಕ್ರೋಶ ವ್ಯಕ್ತಪಡಿಸಿದರು. ಇದೇ ವೇಳೆ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಮೊದಲು ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ರಾಮ ಮಂದಿರ ಲೋಕಾರ್ಪಣೆಯ ಆಹ್ವಾನ ಬಂದಿಲ್ಲ ಎಂದರು. ಆಹ್ವಾನ ಬಂದ ಮೇಲೆ ನಾನು ಹೋಗುವುದಿಲ್ಲ ಎಂದರು ಎಂದು ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿದರು. ನೀನು ಬಾ, ಅಥವಾ ಬೀಡು. ಆದರೆ ರಾಮ ಜನ್ಮಭೂಮಿಯಲ್ಲಿ ಏನೂ ನಿಲ್ಲೋದಿಲ್ಲ ಮಗನೇ ಎಂದು ನಿಂದಿಸಿದರು. ಇನ್ನು ಮೊದಲಿಗೆ ಜನವರಿ 22ಕ್ಕೆ ಅಯೋಧ್ಯೆಗೆ ಹೋಗುವುದಿಲ್ಲ ಎಂದು ಹೇಳಿದ್ದ ಸಿದ್ದರಾಮಯ್ಯ ನಂತರ ಹೋಗುತ್ತೇನೆ ಎಂದು ಹೇಳಿದ್ದಾರೆ. ಇದು ಹಿಂದೂ ಸಮಾಜದ ತಾಕತ್ತು, ದಮ್ ಎಂದು ಹೆಗಡೆ ಹೇಳಿದರು.

# ಜಲಜೀವನ್ ಮಿಷನ್: ಅವೈಜ್ಞಾನಿಕ ಕಾಮಗಾರಿ ಕೈಗೆತ್ತಿಕೊಂಡ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ; ಸರ್ಕಾರ ಎಚ್ಚರಿಕೆ

ಮಂಗಳೂರು: ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆ ಅನುಷ್ಠಾನ ವೇಳೆ ಗುಣಮಟ್ಟದಲ್ಲಿ ರಾಜಿ ಮಾಡಿದ ಹಾಗೂ ಅವೈಜ್ಞಾನಿಕ ಕಾಮಗಾರಿ ಕೈಗೆತ್ತಿಕೊಂಡ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಶುಕ್ರವಾರ ಎಚ್ಚರಿಕೆ ನೀಡಿದ್ದಾರೆ.

ದ.ಕ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಸಚಿವರು, ಜಲಜೀವನ್ ಮಿಷನ್ ಕಾಮಗಾರಿಗಳ ವಿಳಂಬ, ಕಳಪೆ ಹಾಗೂ ಅವೈಜ್ಞಾನಿಕವಾಗಿ ನಡೆದಿದೆ ಎಂದು ಸಭೆಯಲ್ಲಿ ವ್ಯಕ್ತವಾದ ಆರೋಪಕ್ಕೆ ಪ್ರತಿಕ್ರಿಯೆ ನೀಡಿದರು.

ಜಲಜೀವನ್ ಮಿಷನ್ ಯೋಜನೆಯ ಪ್ರಗತಿ ಪರಿಶೀಲನೆಯ ಸಂದರ್ಭ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಆನಂದ್ ಮಾತನಾಡಿ, ಯೋಜನೆಯು ಮೂರು ಹಂತಗಳಲ್ಲಿ ನಡೆಯುತ್ತಿದ್ದು, ಪ್ರಥಮ ಹಂತದ 458 ಕಾಮಗಾರಿಗಳು 125.68 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಂಡಿವೆ. 2ನೆ ಹಂತದ 134ರಲ್ಲಿ 32 ಪೂರ್ಣಗೊಂಡಿದ್ದು, 102 ಪ್ರಗತಿಯಲ್ಲಿವೆ.




3ನೆ ಹಂತದಲ್ಲಿ 108 ಕಾಮಗಾರಿಗಳಲ್ಲಿ 11 ಕಾಮಗಾರಿ ಪೂರ್ಣಗೊಂಡು, 97 ಕಾಮಗಾರಿಗಳು ಪೂರ್ಣಗೊಂಡಿವೆ ಎಂದು ವಿವರ ನೀಡಿದರು.

ಕೆಡಿಪಿ ನಾಮ ನಿರ್ದೇಶಿತ ಸದಸ್ಯ ಮೆಲ್ವಿನ್ ಡಿಸೋಜಾ ಪ್ರತಿಕ್ರಿಯಿಸಿ, ಅಡ್ಯಾರ್ ಮತ್ತು ನೀರುಮಾರ್ಗದಲ್ಲಿ ಈ ಯೋಜನೆ ಯಡಿ ಮಾಡಲಾಗಿರುವ ಓವರ್‌ಹೆಡ್ ಟ್ಯಾಂಕ್ ಅಂದಾಜುಪಟ್ಟಿಯಂತೆ ಮಾಡಲಾಗಿಲ್ಲ. ಪೈಪ್‌ಲೈನ್ ಇರುವಲ್ಲಿಯೇ ಮತ್ತೆ ಜೋಡಣೆ ಮಾಡಲಾಗಿದ್ದು, ಇಲ್ಲದಿರುವಲ್ಲಿ ಸಂಪರ್ಕ ವ್ಯವಸ್ಥೆ ಮಾಡಿಲ್ಲ. ನೀರಿನ ಮೂಲವನ್ನೇ ಗುರುತಿಸಲಾಗಿಲ್ಲ ಎಂದು ದೂರಿದರು.

ಶಾಸಕ ಹರೀಶ್ ಪೂಂಜ ಮಾತನಾಡಿ ಯೋಜನೆಯಡಿ ನಿಗದಿತ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿರ್ಮಾಣ ಮಾಡಲಾಗಿದೆಯೇ ಎಂದು ಪ್ರಶ್ನಿಸಿದರು.

ಪ್ರಥಮ ಹಂತದಲ್ಲಿ ಪೂರ್ಣಗೊಂಡಿರುವ 458 ಕಾಮಗಾರಿಗಳಿಂದ ನೀರು ಪೂರೈಕೆ ಆರಂಭವಾಗಿದೆಯೇ ಎಂಬ ಸಚಿವ ದಿನೇಶ್ ಗುಂಡೂರಾವ್ ಪ್ರಶ್ನೆಗೆ ಸಂಬಂಧಪಟ್ಟ ಅಧಿಕಾರಿ ನಿರುತ್ತರರಾಗಿದ್ದರು.

ಈ ವೇಳೆ ಉದ್ದೇಶ ಈಡೇರದಿದ್ದರೆ ಈ ರೀತಿ ಕೋಟಿಗಟ್ಟಲೆ ವ್ಯಯಿಸಿ ಮಾಡಲಾಗುವ ಕಾಮಗಾರಿಯಿಂದ ಲಾಭವೇನು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೂರ್ಣಗೊಂಡಿರುವ ಕೆಲಸಗಳು, ಎಷ್ಟು ಕಡೆಗಳಲ್ಲಿ ಮನೆಗಳಿಗೆ ನೀರು ತಲುಪಿದೆ ಎಂಬ ಮಾಹಿತಿ ಸಹಿತ ಸಮಗ್ರ ವರದಿಯನ್ನು ಒಂದು ವಾರದೊಳಗೆ ನೀಡಬೇಕು. ಎಲ್ಲೆಲ್ಲಾ ಕಾಮಗಾರಿಗಳು ಅಸಮರ್ಪವಾಗಿವೆಯೇ ಅದನ್ನು ಸರಿಪಡಿಸಬೇಕು. ಶೀಘ್ರದಲ್ಲೇ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು. ಕಳಪೆ, ಅವೈಜ್ಞಾನಿಕ ಕಾಮಗಾರಿ ಕಂಡುಬಂದರೆ ಕ್ರಮ ವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಕೆಂಭಾವಿ ಪದವಿ ಕಾಲೇಜಿಗೆ ನ್ಯಾಕ್ ಮಾನ್ಯತೆ ಯಾವಾಗ?

## ಧೂಳು ಹಿಡಿಯುತ್ತಿರುವ ಪ್ರಯೋಗಾಲಯ ಕೋಣೆ

**ಹೈಲೇಟ್ಸ್:**

- ದಿನದ ಎರಡನೇ ಅವಧಿಗೆ ಬಿಕೋ ಎನ್ನುತ್ತಿದೆ ಕಾಲೇಜು ವಾತಾವರಣ
- ದೂಳು ಹಿಡಿಯುತ್ತಿರುವ ಪ್ರಯೋಗಾಲಯ ಕೋಣೆಗಳು
- ಪದವಿ ಕಾಲೇಜಿಗೆ ನ್ಯಾಕ ಮಾನ್ಯತೆ ಯಾವಾಗ?
- ನೂತನ ಪ್ರಾಂಶುಪಾಲರಿಂದ ಚೂರು ಬದಲಾವಣೆ ಗಾಳಿ?






**ವರದಿ: ವೀರಣ್ಣ ಕಲಕೇರಿ**

ಕೆಂಭಾವಿ: ಗ್ರಾಮೀಣ ಭಾಗದ ಶೈಕ್ಷಣಿಕ ಅಭಿವೃದ್ಧಿಗಾಗಿ ಸುಮಾರು 15 ವರ್ಷಗಳ ಹಿಂದೆ ಆರಂಭವಾದ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಸುಸಜ್ಜಿತ ಕಟ್ಟಡ ಹೊಂದಿದರೂ ಸಮಯಕ್ಕೆ ಸರಿಯಾಗಿ ತರಗತಿಗಳು ನಡೆಯುತ್ತಿಲ್ಲ ಎಂಬ ಆರೋಪ ಹಲವರಿಂದ ಕೇಳಿಬರುತ್ತಿದೆ. ನಿತ್ಯವೂ ಮದ್ಯಾಹ್ನದ ಅವಧಿಯಲ್ಲಿ ಕಾಲೇಜು ವಾತಾವರಣ ಬಿಕೋ ಎನ್ನುವಂತಿರುತ್ಯದೆ. ಕಾಲೇಜಿನಲ್ಲಿ 8 ಜನ ಕಾಯಂ ಉಪನ್ಯಾಸಕರು 18 ಜನ ಅತಿಥಿ ಉಪನ್ಯಾಸಕರು ಮತ್ತು 3 ಜನ ಬೋಧಕೇತರ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೂ ಸಮಯ ಪಾಲನೆ ಇಲ್ಲದ ಕಾರಣ ತರಗತಿಗಳು ಸರಿಯಾಗಿ ನಡೆಯುತ್ತಿಲ್ಲವೆಂಬ ದೂರು ವಿದ್ಯಾರ್ಥಿಗಳದ್ದಾಗಿದೆ.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕೂಡ ವಿಜ್ಞಾನ ವಿಷಯದ ಅದ್ಯಯನದಲ್ಲಿ ತೊಡಗಲಿ ಎಂಬ ಸದುದ್ದೇಶದಿಂದ ಕಾಲೇಜು ಆರಂಭದಿಂದ ವಿಜ್ಞಾನ ವಿಭಾಗ ಇಲ್ಲಿದ್ದು ಪ್ರಾಯೋಗಿಕ ಸಲಕರಣೆಗಳು ಧೂಳು ತಿಂದು ಕೋಣೆಗಳು ಪರಿಪೂರ್ಣ ಅಸ್ತವ್ಯಸ್ತಗೊಂಡಿದ್ದು ನೋಡಿದರೆ ಈ ವಿಭಾಗಳು ಮುಚ್ಚಿ ಹೋಗಿವೆ ಎನ್ನುವುದು ಸಹಜ. ವಿದ್ಯಾರ್ಥಿಗಳಿಗೆ ಥೇರಿ ಮತ್ತು ಪ್ರಾಕ್ಟಿಕಲ್ ತರಗತಿಗಳು ಸರಿಯಾಗಿ ನಡೆಯದೆ ಇರುವುದರಿಂದ ಇದೆ ನೆಪದಲ್ಲಿ ವಿದ್ಯಾರ್ಥಿಗಳು ಕೂಡ ಕಾಲೇಜಿಗೆ ಚಕ್ಕರ ಹೊಡಿಯುತ್ತಿದ್ದಾರೆ ಎನ್ನಲಾಗುವುದು.

ಕಲಾ ವಿಭಾಗ ವಾಣಿಜ್ಯ ಹಾಗೂ ವಿಜ್ಞಾನ ವಿಭಾಗ ಹೀಗೆ ಮೂರು ವಿಭಾಗ ಹೊಂದಿರುವ ಪಟ್ಟಣದ ಈ ಕಾಲೇಜಿನಲ್ಲಿ ಇಲ್ಲಿಯ ವರೆಗೆ ಮೂರು ಜನ ಪ್ರಭಾರಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸಿದ್ದರೂ, ನ್ಯಾಕ ಅನುಷ್ಠಾನದ ಹಿನ್ನೆಲೆಯಲ್ಲಿ ಕೇವಲ ಕಾಟಾಚಾರದ ಪ್ರಯತ್ನಗಳೆ ನಡೆದಿವೆ ಇನ್ನೂವರೆಗೂ (ವಿಶ್ವ ವಿಧ್ಯಾಲಯ ಧನ ಸಹಾಯ ಆಯೋಗ) ಯುಜಿಸಿ ಗ್ರಾಂಟ್ ಕಮಿಷನ್ ನೀಡುವ ಯಾವುದೇ ಸೌಲಭ್ಯಗಳನ್ನು ಪಡೆಯದೆ ಇರುವುದು ಕಳವಳಕಾರಿ ಸಂಗತಿ ಎಂದು ಪ್ರಜ್ಞಾವಂತರ ಮಾತಾಗಿದೆ.

ಇತ್ತೀಚೆಗೆ ನೂತನ ಪ್ರಭಾರಿ ಪ್ರಾಂಶುಪಾಲರಾಗಿ ಅಧಿಕಾರ ವಹಿಸಿಕೊಂಡ ಡಾ. ನಾಗಪ್ಪ ಚಾವಲಕರ್ ರವರಿಂದ ಇದೀಗ ಕಾಲೇಜು ವಾತಾವರ ಚೂರು ಬದಲಾವಣೆ ಗಾಳಿ ಬೀಸುತ್ತಿದೆ ಎನ್ನಲಾಗಿದೆ, ವಿದ್ಯಾರ್ಥಿಗಳಿಗೆ ಸಮವಸ್ತ್ರ ಗುರುತಿನ ಚೀಟಿ ಸಿಬ್ಬಂದಿಗಳಲ್ಲಿಯೂ ಕೂಡ ಸಿಸ್ತು ಪರಿಪಾಲನೆಗೆ ಚೂರು ಒತ್ತು ಕೊಡುತ್ತಿದ್ದಾರೆ ಎನ್ನಲಾದರೂ ಸಮಯಕ್ಕೆ ಸರಿಯಾಗಿ ತರಗತಿಗಳು ಇನ್ನೂ ನಡೆಯುತ್ತಿಲ್ಲ ಎಂಬ ಮಾತು ಅಲ್ಲಗಳೆಯುವಂತಿಲ್ಲ. ಮದ್ಯಾಹ್ನದಲ್ಲಿ ಬಣಗುಡುತ್ತಿರುವ ಕಾಲೇಜು ವಾತಾವರಣ ನೋಡಿದರೆ ಈ ಕಾಲೇಜು ದೂರ ಶಿಕ್ಷಣ ಕೇಂದ್ರವೋ ಅಥವಾ ರೆಗ್ಯೂಲರ್ ಕಾಲೇಜೊ ಎಂಬ ಪ್ರಶ್ನೆ ಸಹಜವಾಗಿ ಕಾಡುವಂತಾಗಿದೆ.


ನೂತನ ಪ್ರಾಚಾರ್ಯರಾಗಿ ಅಧಿಕಾರ ವಹಿಸಿಕೊಂಡ ಡಾ. ಚಾವಲ್ಕರ ರವರು ಕಾಲೇಜು ವಾತಾವರಣ ಸೇರಿದಂತೆ ತರಗತಿಗಳು, ಸಮಯ ಪರಿಪಾಲನೆ, ವಿಜ್ಞಾನ ವಿಭಾಗದ ಪ್ರಾಯೋಗಿಕ ತರಗತಿಗಳು ನಡೆಸುವುದರ ಜತೆಗೆ ಗ್ರಾಮೀಣ ಮಕ್ಕಳ ಕಲಿಕೆಗೆ ಪೂರಕ ವಾತಾವರಣ ಸೃಷ್ಟಿಸಿ ಶೀಘ್ರದಲ್ಲೆ ನ್ಯಾಕ್ ಅನುಷ್ಠಾನ ಮಾಡುವ ಮೂಲಕ ಜಿಲ್ಲೆಯಲ್ಲಿ ಮಾದರಿ ಕಾಲೇಜನ್ನಾಗಿ ಮಾರ್ಪಡಿಸಲು ಮುತುವರ್ಜಿ ವಹಿಸಿ ಕಾಲೇಜು ಸರಿಯಾದ ದಿಕ್ಕಿನಲ್ಲಿ ತರುವ ಬಹು ದೊಡ್ಡ ಜವಬ್ದಾರಿ ಇದೆ, ಆ ನಿಟ್ಟಿನಲ್ಲಿ ಪ್ರಯತ್ನವಾಗಲಿ ಎಂಬುವುದೆ ಸಾರ್ವಜನಿಕ ಆಶಯವಾಗಿದೆ.

> ನಾನು ಹೊಸದಾಗಿ ಅಧಿಕಾರ ವಹಿಸಿಕೊಂಡಿರುವೆ, ಈಗಾಗಲೆ ಸಿಬ್ಬಂದಿಗಳಿಗೆ ಸಮಯ ಪರಿಪಾಲನೆ ಜತೆಗೆ ತರಗತಿಗಳ ನಿರ್ವಹಣೆ ಕುರಿತು ಕಟ್ಟು ನಿಟ್ಟಿನ ಸೂಚನೆ ನೀಡಿದ್ದೇನೆ. ಬರುವ ದಿನಗಳಲ್ಲಿ ನ್ಯಾಕ್ ಅನುಷ್ಠಾನ ಮಾಡಲು ಪ್ರಯತ್ನಿಸುವೆ.
>
> **–ಡಾ. ನಾಗಪ್ಪ ಚಾವಲ್ಕರ್**
> **ಪ್ರಾಂಶುಪಾಲರು.**

> ಕಾಲೇಜಿನಲ್ಲಿ ಕಲಿಕೆಗೆ ಪೂರಕವಾದ ವಾತಾವರಣ ಇಲ್ಲದೆ ಇರುವದು ಬೇಸರದ ಸಂಗತಿ. ತರಗತಿಗಳು ಸರಿಯಾಗಿ ನಡೆಯುತ್ತಿಲ್ಲ, ಎಲ್ಲಾ ಪ್ರಕಾರದ ಪ್ರಯೋಗಾಲಯ ಸೂಕ್ತವಾಗಿ ಬಳಸಬೇಕು. ಇಲ್ಲಿನ ವಾತಾವರಣ ನೋಡಿದರೆ ಯುಜಿಸಿ ನ್ಯಾಕ್ ಕಮೀಟಿ ಬರುವ ಲಕ್ಷಣಗಳೆ ಕಾಣುತ್ತಿಲ್ಲ. ನೂತನ ಪ್ರಾಂಶುಪಾಲರು ಮುತುವರ್ಜಿವಹಿಸಬೇಕು.
>
> **–ಪರಶುರಾಮ ಸಿ. ಮಾಳಳ್ಳಿಕರ್**
> **ಸಂಶೋಧನ ವಿದ್ಯಾರ್ಥಿ ಗು.ವಿ.ಕ.**

# ಉದ್ಯಮಿ ಅಪಹರಿಸಿ ಸುಲಿಗೆ: ಯುಪಿಎಸ್'ಸಿ ಆಕಾಂಕ್ಷಿ ಸೇರಿ ಇಬ್ಬರ ಬಂಧನ

ಬೆಂಗಳೂರು: ಉದ್ಯಮಿಯೊಬ್ಬರನ್ನು ಅಪಹರಿಸಿ, ಸುಲಿಗೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಯುಪಿಎಸ್'ಸಿ ಆಕಾಂಕ್ಷಿ ಸೇರಿ ಇಬ್ಬರು ಆರೋಪಿಗಳನ್ನು ರಾಜಾಜಿನಗರ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.



ಬಂಧಿತ ಆರೋಪಿಗಳನ್ನು ಸಚಿನ್, ಗೌರಿಶಂಕರ್ ಎಂದು ಗುರ್ತಿಸಲಾಗಿದೆ. ಇಬ್ಬರ ಪೈಕಿ ಓರ್ವ ಆರೋಪಿ ಸಚಿನ್ ಯುಪಿಎಸ್'ಸಿ ಆಕಾಂಕ್ಷಿ ಯಾಗಿದ್ದ ಎಂದು ತಿಳಿದುಬಂದಿದೆ.

ಅಪಹರಣಕ್ಕೊಳಗಾಗಿದ್ದ ವ್ಯಕ್ತಿಯನ್ನು ಚೇತನ್ ಶಾ ಎಂದು ಗುರುತಿಸಲಾಗಿದ್ದು, ಚೇತನ್ ಅವರು ತಮ್ಮ ಮಗಳನ್ನು ಸಿಬಿಡಿ ಪ್ರದೇಶದ ಹೆಸರಾಂತ ಕಾಲೇಜಿಗೆ ಬ್ಯಾಚುಲರ್ಸ್ ಇನ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (ಬಿಬಿಎ) ಕೋರ್ಸ್‌ಗೆ ಸೇರಿಸಲು ಬಯಸಿದ್ದರು. ಈ ಪ್ರಯತ್ನದಲ್ಲಿ ಆರೋಪಿಗಳ ಸಂಪರ್ಕಕ್ಕೆ ಸಿಕ್ಕಿದ್ದಾರೆ. ಸೀಟ್ ಕೊಡಿಸುವ ಭರವಸೆಯನ್ನು ಆರೋಪಿಗಳು ಚೇತನ್ ಅವರಿಗೆ ನೀಡಿದ್ದಾರೆ.

ಚೇತನ್ ಅವರು ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಕಾರ್ಖಾನೆಯನ್ನು ಹೊಂದಿದ್ದು, ಇತರರ ನೆರವಿನೊಂದಿಗೆ ಮಗಳಿಗಾಗಿ ಸೀಟು ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಆರೋಪಿಗಳು ಸೀಟು ಸಿಕ್ಕಿರುವುದು ತಮ್ಮಿಂದ ಎಂದು ಹೇಳಿ, ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ಈ ವೇಳೆ ಚೇತನ್ ಅವರು ಹಣ ನೀಡರು ನಿರಾಕರಿಸಿದ್ದಾನೆ. ಇದರಿಂದ ಕೆಂಡಾಮಂಡಲಗೊಂಡಿರುವ ಆರೋಪಿಗಳು ಚೇತನ್ ಅವರನ್ನು ಆಟೋರಿಕ್ಷಾದಲ್ಲಿ ಅಪಹರಿಸಿ, 7 ಲಕ್ಷ ರೂಪಾಯಿ ಸುಲಿಗೆ ಮಾಡಿದ್ದಾರೆ.

ಜನವರಿ 5 ರಂದು ಡಾ ರಾಜ್‌ಕುಮಾರ್ ರಸ್ತೆಯಿಂದ ಚೇತನ್ ಅವರನ್ನು ಅಪಹರಿಸಿದ್ದಾರೆ. ಹಣ ನೀಡುವಂತೆ ಚೇತನ್ ಅವರ ಪತ್ನಿಯನ್ನು ಸಂಪರ್ಕಿಸಿದ್ದಾರೆ. ಹಣ ಪಡೆದ ಬಳಿಕ ಚೇತನ್ ಅವರನ್ನು ಬಿಡುಗಡೆ ಮಾಡಿದ್ದಾರೆ.

ಬಿಡುಗಡೆಗೊಂಡ ಬಳಿಕ ಚೇತನ್ ಅವರು ಪೊಲೀಸರಿಗೆ ದೂರು ನೀಡಿದ್ದಾರೆ. ಇದರಂತೆ ರಾಜಾಜಿನಗರ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಅಪಹರಣಕ್ಕಾಗಿ ಬಳಸಿದ್ದ ಆಟೋ ಹಾಗೂ ಎರಡು ಫೋನ್ ಗಳನ್ನು ಆರೋಪಿಗಳಿಂದ ವಶಕ್ಕೆ ಪಡೆದುಕೊಂಡಿದ್ದಾರೆ.

# ಸಚಿವ ಸತೀಶ್ ಜಾರಕಿಹೊಳಿಗೆ ಡಿಸಿಎಂ ಸ್ಥಾನ ನೀಡಲು ದಲಿತ ಸಂಘಟನೆಗಳ ಒಕ್ಕೂಟ ಆಗ್ರಹ



ಬೆಳಗಾವಿ: ಪ್ರಜ್ಞಾವಂತ, ವಿಚಾರವಂತ, ಸರಳ ಸಜ್ಜನಿಕೆಯ ವ್ಯಕ್ತಿ, ಪ್ರಭಾವಿ ರಾಜಕಾರಣಿಯಾದ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಡಿಸಿಎಂ ಸ್ಥಾನ ನೀಡಬೇಕೆಂದು ದಲಿತ ಸಂಘಟನೆಗಳ ಒಕ್ಕೂಟ ಕಾಂಗ್ರೆಸ್ ಹೈಕಮಾಂಡ್ ಗೆ ಆಗ್ರಹಿಸಿದೆ.

ಈ ಕುರಿತು ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ದಲಿತ ಮುಖಂಡ ಮಲ್ಲೇಶ ಚೌಗಲೆ, ಜಿಲ್ಲೆಯ ವಿವಿಧ ದಲಿತ ಸಂಘಟನೆಗಳ ಒಕ್ಕೂಟ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕಿ ಸೋನಿಯಾ ಗಾಂಧಿ, ಕರ್ನಾಟಕ ರಾಜ್ಯ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೆವಾಲಾ ಅವರಿಗೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಡಿಸಿಎಂ ಹುದ್ದೆ ನೀಡಬೇಕೆಂದು ಮನವಿಯನ್ನು ಸಲ್ಲಿಸಿದ್ದೇವೆ ಎಂದು ತಿಳಿಸಿದರು.

ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯದ ಪ್ರಭಾವಿ ನಾಯಕರು, ಸುಮಾರು 35–40 ವರ್ಷಗಳಿಂದ ಬಡ ಕುಟುಂಬಗಳಿಗೆ, ಸಾರ್ವಜನಕರಿಗೆ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆ ಮತ್ತು ಅಭಿವೃದ್ಧಿಗೆ ಅನುಕೂಲ ಆಗುವ ಸಾಕಷ್ಟು ಕೆಲಸಗಳನ್ನು ಮಾಡುತ್ತಾ ಬಂದಿದ್ದಲ್ಲದೆ, ತಮ್ಮ ವ್ಯಕ್ತಿತ್ವಕ್ಕೆ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಕಾರ್ಯ ನಿರ್ವಹಿಸಿದ್ದಾರೆ. ಏಕಲವ್ಯ ಕಾರ್ಯಾಧ್ಯಕ್ಷರಾಗಿ ಕಾಲಿಗೆ ಚಕ್ರ ಕಟ್ಟಿಕೊಂಡು ಶೋಷಿತ ಸಮುದಾಯಗಳ ಪ್ರಗತಿ ಜತೆಗೆ ಇತರೆ ಸಮುದಾಯದ ಮುಖಂಡರನ್ನು ಒಗ್ಗೂಡಿಸಿ, ಕಾಂಗ್ರೆಸ್ ಪಕ್ಷವನ್ನು ಬಲಿಷ್ಠವಾಗಿ ಕಟ್ಟಿದ್ದಾರೆ. ಅವರ ಚಾಣಾಕ್ಷತನದಿಂದ ಕೆಲಸ ಮಾಡಿದ್ದಕ್ಕಾಗಿಯೇ ಕಳೆದ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಹೆಚ್ಚಿನ ಸೀಟು ಗೆಲ್ಲಲು ಅವರ ಪಾತ್ರವೂ ಇದೆ ಎಂದರು.

ಕರ್ನಾಟಕದ ಜನಪ್ರಿಯ ರಾಜಕೀಯ ಮುತ್ಸದ್ದಿಯಾಗಿ ಹೊರಹೊಮ್ಮಿದ ಸತೀಶ್ ಜಾರಕಿಹೊಳಿ ಅವರನ್ನು ರಾಜ್ಯದ ಉಪ ಮುಖ್ಯಮಂತ್ರಿಯಾಗಿ ಘೋಷಿಸಬೇಕು. ಅವರಿಗೆ ಡಿಸಿಎಂ ಸ್ಥಾನ ನೀಡಿದರೆ ಕಾಂಗ್ರೆಸ್ ಪಕ್ಷವು ಕರ್ನಾಟಕದಲ್ಲಿ ಇನ್ನಷ್ಟು ಸಮರ್ಥವಾಗಿ ಮತ್ತು ಬಲಿಷ್ಠವಾಗಿ ಬೆಳೆಯಲು ಅನುಕೂಲವಾಗುತ್ತದೆ. ಆದ್ದರಿಂದ ತಕ್ಷಣವೇ ಸತೀಶ್ ಜಾರಕಿಹೊಳಿ ಅವರನ್ನು ಉಪ ಮುಖ್ಯಮಂತ್ರಿಯಾಗಿ ಘೋಷಿಸಬೇಕೆಂದು ಆಗ್ರಹಿಸಿದರು.

ಮುಖಂಡರಾದ ಮಹಾದೇವ ತಳವಾರ, ಯಲ್ಲಪ್ಪಾ ಹುದಲಿ ಮಾತನಾಡಿ, ಎಲ್ಲಾ ದಲಿತ ಸಂಘಟನೆಗಳ ಒಕ್ಕೂಟದ ಸದಸ್ಯರು ಮನವಿ ಪತ್ರದಲ್ಲಿ ರಕ್ತದ ಸಹಿ ಮಾಡುವ ಮೂಲಕ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಶೀಘ್ರವೇ ಡಿಸಿಎಂ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸುತ್ತಿದ್ದೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ದಲಿತ ಮುಖಂಡರಾದ ವಿನೋದ ವಿ. ಸೊಲ್ಲಾಪುರೆ, ಸುಧೀರ್ ಚೌಗಲೆ, ಮಹಾದೇವ ತಳವಾರ, ಸಿದ್ದಪ್ಪಾ ಕಾಂಬಳೆ, ಯಲ್ಲಪ್ಪಾ ಹುದಲಿ, ಸಂತೋಷ ಹಲಗೇಕರ್, ಗಜಾನನ ಸುಳಗೇಕರ್, ಪ್ರವೀಣ ಪೂಜಾರಿ, ಬಾವಕಣ್ಣ ಪಿರಗಾಣಿ, ಕರೆಪ್ಪ ಗುಡೇಣ್ಣವರ್, ರಮಾನಂದ ಮೇತ್ರಿ ಸೇರಿದಂತೆ ಅನೇಕ ಮುಖಂಡರು ಇದ್ದರು.

# ವಿವೇಕಾನಂದರ ಜಯಂತಿ ಆಚರಣೆ



ಬೆಳಗಾವಿ: ನಗರದ ಕೆ.ಎಲ್.ಎಸ್ ಸೊಸೈಟಿಯ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜೆಎನ್‌ಎಂಸಿ ಶಸ್ತ್ರ ಚಿಕಿತ್ಸಾ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಡಾ.ಕಿಶೋರ್ ಬಂಡಗಾರ ಸ್ವಾಮಿ ವಿವೇಕಾನಂದರ ಜೀವನ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ, ವಿದ್ಯಾರ್ಥಿಗಳು ರಾಷ್ಟ್ರೀಯ ಮನೋಭಾವನೆಯನ್ನು ಹೊಂದಿ, ವಿವೇಕಾನಂದರ ತತ್ವಾದರ್ಶಗಳನ್ನು ದಿನ ನಿತ್ಯದ ಜೀವನದಲ್ಲಿ ಪಾಲಿಸುವಂತೆ ಸಲಹೆ ನೀಡಿದರು. ಸಾಮಾಜಿಕ ಕಾರ್ಯಕರ್ತ ಕಿಶೋರ್ ಕಾಕಡೆ ಭಾಗವಹಿಸಿ ಭಾರತೀಯ ಸಮಾಜದ ಮೌಲ್ಯಗಳು ಮತ್ತು ಸಂಪ್ರದಾಯಗಳ ಕುರಿತು ಮಾತನಾಡಿದರು.

ಕಾಲೇಜಿನ ಸಾಂಸ್ಕೃತಿಕ ಮತ್ತು ಎನ್ ಎಸ್.ಎಸ್ ಘಟಕದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಡಾ.ಎ.ಎಚ್.ಹವಾಲ್ದಾರ್ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಸುಹಾಸ ಹುದ್ದಾರ್ ಸ್ವಾಗತಿಸಿ, ಪ್ರಜ್ವಲ್ ತಾಪ್ಸಿ ವಂದಿಸಿ, ಸಹನಾ ವಾಲಿ ಹಾಗೂ ಫಣಿ ದೇಸಾಯಿ ಕಾರ್ಯಕ್ರಮ ನಿರೂಪಿಸಿದರು. ವಿಭಾಗದ ಮುಖ್ಯಸ್ಥರಾದ ಪ್ರೊ. ಶಿಲ್ಪಾ ರಾಯ್ಕರ್ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಚಿರತೆ ಸಾವು



ಚಿಕ್ಕಮಗಳೂರು: ಕಾಡು ಪ್ರಾಣಿಗಳ ಬೇಟೆಗೆ ಹಾಕಿದ್ದ ಉರುಳಿಗೆ ಸಿಲುಕಿ ಒಂದುವರೆ ವರ್ಷದ ಗಂಡು ಚಿರತೆ ಮೃತಪಟ್ಟಿರುವ ಘಟನೆ ಚಿಕ್ಕಮಗಳೂರು ತಾಲೂಕಿನ ಹುಳಿಯಾರದಹಳ್ಳಿಯಲ್ಲಿ ನಡೆದಿದೆ.

ಕಾಡು ಪ್ರಾಣಿಗಳ ಬೇಟೆಗಾಗಿ ಜಮೀನಿನಲ್ಲಿ ಉರುಳು ಹಾಕಲಾಗಿತ್ತು. ಚಿರತೆ ಮಧ್ಯರಾತ್ರಿ ಉರುಳಿಗೆ ಸಿಲುಕಿ ನರಳಾಡುತ್ತಿತ್ತು. ಬೆಳಿಗ್ಗೆ ಉರುಳಿಗೆ ಸಿಲುಕಿದ್ದ ಚಿರತೆಯನ್ನು ರಕ್ಷಿಸಿ, ಅರಣ್ಯ ಇಲಾಖೆಯ ಸಿಬ್ಬಂದಿ ಚಿಕಿತ್ಸೆ ನೀಡಿದ್ದರು.

ಚಿಕಿತ್ಸೆ ಫಲಕಾರಿಯಾಗದೆ ಚಿರತೆ ಮೃತಪಟ್ಟಿದೆ. ಚಿಕ್ಕಮಗಳೂರು ಅರಣ್ಯ ವಲಯ ವ್ಯಾಪ್ತಿಯಲ್ಲಿ ಘಟನೆ. ಚಿರತೆ ಕಳೆದ ಎರಡು ತಿಂಗಳಿನಿಂದ ಹುಳಿಯಾರದಹಳ್ಳಿ ಸೇರಿದಂತೆ ವಿವಿಧ ಗ್ರಾಮದಲ್ಲಿ ಸಂಚಾರ ಮಾಡುತ್ತಿತ್ತು.

# ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಸನ್ಮಾನ




ಬೆಳಗಾವಿ: ವಿಶ್ವ ಭಾರತ ಸೇವಾ ಸಮಿತಿಯ ಹಿಂಡಲಗಾ ಹೈಸ್ಕೂಲ್ ವತಿಯಿಂದ ಶನಿವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ನಿಮ್ಮೆಲ್ಲರ ಪ್ರೀತಿ, ಆಶೀರ್ವಾದದಿಂದ ನಾನು ರಾಜ್ಯದ ಮಂತ್ರಿಯಾಗಿದ್ದೇನೆ. ಇಡೀ ರಾಜ್ಯದ ಜನರ ಸೇವೆ ಮಾಡುವ ಅವಕಾಶವನ್ನು ನನಗೆ ಕೊಟ್ಟಿದ್ದೀರಿ. ಕ್ಷೇತ್ರದ ಗೌರವವನ್ನು ಎತ್ತಿ ಹಿಡಿಯುವ ಕೆಲಸವನ್ನು ಮಾಡುತ್ತೇನೆ.

ರಾಜ್ಯದ ಅಭಿವೃದ್ಧಿಯ ಜೊತೆಗೆ ಕ್ಷೇತ್ರದ ಅಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡುತ್ತೇನೆ ಎಂದು ಹೆಬ್ಬಾಳಕರ್ ಈ ಸಂದರ್ಭದಲ್ಲಿ ಭರವಸೆ ನೀಡಿದರು.

ಈ ಸಮಯದಲ್ಲಿ ಯುವರಾಜ ಕದಂ, ವಿಶ್ವ ಭಾರತ ಸೇವಾ ಸಮಿತಿಯ ಅಧ್ಯಕ್ಷ ವಿಜಯರಾವ್ ನಂದಿಹಳ್ಳಿ, ಸ್ಕೇಟಿಂಗ್ ಗೋಲ್ಡ್ ಮೆಡಲಿಸ್ಟ್ ಸಾಯಿ ಪಾಟೀಲ, ವಿಠ್ಠಲ ದೇಸಾಯಿ, ಪ್ರವೀಣ ಪಾಟೀಲ, ಅಶೋಕ ಕಾಂಬಳೆ, ರಾಹುಲ್ ಉರನಕರ್, ರೇಣುಕಾ ಬಾತ್ಕಂಡೆ, ಅಲ್ಕಾ ಕಿತ್ತೂರ್, ಪ್ರೇರಣಾ ಮಿರಜಕರ್, ಗಜಾನನ ಕಾಕತ್ಕರ್, ಕೃಷ್ಣ ಪಾವಸೆ, ರವಿ ತೆರಳೆ ಮುಂತಾದವರು ಉಪಸ್ಥಿತರಿದ್ದರು.

# 8 ನವಿಲುಗಳ ಮಾರಣ ಹೋಮ: ಓರ್ವ ಬಂಧನ



ಚಿಕ್ಕೋಡಿ: ತಾಲೂಕಿನ ಮಾಂಜರಿ ಗ್ರಾಮದಲ್ಲಿ ಎಂಟು ನವಿಲುಗಳಿಗೆ ವಿಷ ಉಣಿಸಿ ಹತ್ಯೆ ಮಾಡಿದ ಆರೋಪಿಯನ್ನು ಬಂಧಿಸಲಾಗಿದೆ. ಝುಳಕಿ ಗ್ರಾಮದ ನಿವಾಸಿ ಮಂಜುನಾಥ ಪವಾರ್ ಬಂಧಿತ ವ್ಯಕ್ತಿ.

ಘಟನೆ ಕುರಿತು ರಾಯಬಾಗ ಎಸಿಎಫ್ ಸುನೀತಾ ನಿಂಬರಗಿ ಪ್ರತಿಕ್ರಿಯೆ ನೀಡಿದ್ದು, ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿದಾಗ ಮೂರು ಹೆಣ್ಣು, ಐದು ಗಂಡು ನವಿಲು ಕಂಡು ಬಂತು.

ತಕ್ಷಣ ಮೃತ ನವಿಲುಗಳನ್ನ ತಂದು ಮರಣೋತ್ತರ ಪರೀಕ್ಷೆ ಮಾಡಿಸಿದ್ದೇವೆ. ಇನ್ನೂ ಇಬ್ಬರು ಆರೋಪಿಗಳು ಪರಾರಿಯಾಗಿದ್ದು ಅವರ ಶೋಧ ಮಾಡುತ್ತಿದ್ದೇವೆ ಎಂದಿದ್ದಾರೆ.

ಬಂಧಿತ ಆರೋಪಿ ಮಂಜುನಾಥ ಪವಾರ್ ಇಟ್ಟಿಗೆ ಖಾರ್ನೆಯಲ್ಲಿ ಕೆಲಸ ಮಾಡುತ್ತಿದ್ದ. ಎರಡು ತಂಡ ರಚನೆ ಮಾಡಿದ್ದು, ಎಸ್ಕೇಪ್ ಆಗಿದ್ದವರನ್ನ ಬಂಧಿಸಲಾಗುವುದು. ನವಿಲು ಮಾಂಸಕ್ಕಾಗಿ ವಿಷ ಹಾಕಿ ಕೊಂದಿದ್ದಾರೆ. ಮೆಕ್ಕೆಜೋಳದ ಕಾಳುಗಳಲ್ಲಿ ವಿಷ ಹಾಕಿ ಕೊಂದಿದ್ದಾರೆ ಅಂತಾ ಪ್ರಾಥಮಿಕ ತನಿಖೆಯಲ್ಲಿ ಗೊತ್ತಾಗಿದೆ. ತನಿಖೆ ಬಳಿಕ ಇನ್ನಷ್ಟು ಮಾಹಿತಿ ಬರುವುದಾಗಿ ಸುನೀತಾ ನಿಂಬರಗಿ ಹೇಳಿದ್ದಾರೆ.

# ಮಹಾನ್ ವ್ಯಕ್ತಿಗಳ ಮಾರ್ಗ ಅನುಸರಿಸಲು ಶರಣಬಸವ ಶ್ರೀ ಕಿವಿಮಾತು



ಹುಕ್ಕೇರಿ: ಬುದ್ಧ, ಬಸವ, ಅಂಬೇಡ್ಕರ ಸೇರಿ ಮಹಾನ್ ವ್ಯಕ್ತಿಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವ ಮೂಲಕ ದಲಿತರು ಸಮಾಜದ ಮುಖ್ಯ ವಾಹಿನಿಗೆ ಬರಬೇಕಿರುವ ಅಗತ್ಯವಿದೆ ಎಂದು ಬೆಳವಿ ಶರಣಬಸವ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲೂಕಿನ ಕೊಟಬಾಗಿ ಗ್ರಾಮದ ದಾಸನಟ್ಟಿ ಪ್ಲಾಟ್‌ನ ಅಂಬೇಡ್ಕರ ಸಮುದಾಯ ಭವನ ಬಳಿ ವಿವಿಧ ದಲಿತಪರ ಸಂಘಟನೆಗಳ ಒಕ್ಕೂಟವು ದೇಶದ ಪ್ರಪ್ರಥಮ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಹಾಗೂ ಸ್ವಾಮಿ ವಿವೇಕಾನಂದರ ಜಯಂತ್ಯೋತ್ಸವದ ನಿಮಿತ್ತ ಏರ್ಪಡಿಸಿದ ಬೃಹತ್ ಸಮಾವೇಶದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ದಲಿತರನ್ನು ಜಾಗೃತಿಗೊಳಿಸುವ ಇಂಥ ಕಾರ್ಯಕ್ರಮಗಳನ್ನು ರೂಪಿಸಿರುವುದು ಅತ್ಯಂತ ಶ್ಲಾಘನೀಯ ಎಂದರು.

ಶತ ಶತಮಾನಗಳಿಂದ ಧಾರ್ಮಿಕ ಮತ್ತು ಮೂಢನಂಬಿಕೆಗಳ ಕಟ್ಟಳೆಗಳನ್ನು ಹೇರಿ ಹಿಂದುಳಿದ, ದಲಿತ ಮತ್ತು ಅಲ್ಪಸಂಖ್ಯಾತ ಸಮುದಾಯಗಳನ್ನು ಶೋಷಿಸಲಾಗುತ್ತಿದೆ. ಇದಕ್ಕೆ ಅಂತ್ಯಹಾಡಲು ಅಂಬೇಡ್ಕರರು ಸಂವಿಧಾನ ರಚಿಸಿ ಎಲ್ಲರಿಗೂ ಸಮಾನ ಅವಕಾಶಗಳನ್ನು ಒದಗಿಸಿದರು. ಆದರೆ, ಇತ್ತೀಚಿನ ದಿನಗಳಲ್ಲಿ ಕೆಲವರು ನಮ್ಮ ವಿಶ್ವಶ್ರೇಷ್ಠ ಭಾರತದ ಸಂವಿಧಾನ ಬದಲಾಯಿಸುವ ಹೇಳಿಕೆ ನೀಡುತ್ತಿರುವುದು ಅತ್ಯಂತ ಖಂಡನೀಯ ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಮಾಜಿ ನಿರ್ದೇಶಕರೂ ಆದ ಸಂಘಟಕ ಸುರೇಶ ತಳವಾರ ಮಾತನಾಡಿ, ತಾಲೂಕಿನ ದಲಿತ ಸಮುದಾಯದ ಯುವಕರು, ಮಹಿಳೆಯರು ಸೇರಿ ಇಡೀ ಸಮಾಜದ ಸಂಘಟನೆ ಮತ್ತು ಏಳಿಗೆಗೆ ಹಲವು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಶೀಘ್ರವೇ ಹುಕ್ಕೇರಿಯಲ್ಲಿ ಪ್ರತಿಷ್ಠಾಪಿಸಿದ ಸಂವಿಧಾನ ಶಿಲ್ಪಿ ಅಂಬೇಡ್ಕರರ ಪ್ರತಿಮೆ ಅನಾವರಣ ಕಾರ್ಯಕ್ರಮವನ್ನು ಐತಿಹಾಸಿಕ ಮತ್ತು ಸ್ಮರಣೀಯವಾಗಿ ದಾಖಲಾಗುವಂತೆ ಆಯೋಜಿಸಲಾಗುವುದು ಎಂದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ರಾಯವ್ವಗೋಳ ಉದ್ಘಾಟಿಸಿದರು. ಗ್ರಾಪಂ ಅಧ್ಯಕ್ಷ ಬಸವರಾಜ ಭೂಸಾರಿ, ಎಸ್ಸಿಎಸ್ಟಿ ದೌರ್ಜನ್ಯ ತಡೆ ಜಿಲ್ಲಾ ಸಮಿತಿ ಸದಸ್ಯ ಸಿದ್ಧರಾಯಿ ಮೇತ್ರಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಚ್.ಎ.ಮಾಹುತ, ಮುಖಂಡರಾದ ಶ್ರೀಕಾಂತ ತಳವಾರ, ಉದಯ ಹುಕ್ಕೇರಿ, ಸದಾಶಿವ ಕಾಂಬಳೆ, ಅಪ್ಪಣ್ಣಾ ಖಾತೇದಾರ, ಮಾರುತಿ ತಳವಾರ, ದೀಪಕ ವೀರಮುಖ, ಕುಮಾರ ತಳವಾರ, ಪ್ರಮೋದ ಹೊಸಮನಿ, ಅಕ್ಷಯ ವೀರಮುಖ, ಶಂಕರ ತಿಪ್ಪನಾಯಿಕ, ಯಲ್ಲಪ್ಪ ಡಪರಿ, ಮುತ್ತು ಕಾಂಬಳೆ, ಶಿವಾನಂದ ಮರಿನಾಯಿಕ, ಶಿವು ಕಣಗಲಿ, ಬಾಳು ಕೋಳಿ, ಸಂತೋಷ ಗಸ್ತಿ, ಉಮೇಶ ಮಾಳಗೆ, ಸುಶೀಲ ಹತ್ತರಗಿ, ಹಣಮಂತ ಹಕ್ಕೆನ್ನವರ, ಬಸವರಾಜ ಹುಲ್ಲೋಳಿ ಮತ್ತಿತರರು ಉಪಸ್ಥಿತರಿದ್ದರು.

ಧೂಪದಾಳದ ಸಂತೋಷ ದೊಡಮನಿ ಉಪನ್ಯಾಸ ನೀಡಿದರು. ಸಮಾಜ ಸೇವೆಗೆ ಅನುಪಮ ಕೊಡುಗೆ ನೀಡಿದ ದಲಿತ ಮುಖಂಡರು, ನ್ಯಾಯವಾದಿಗಳು, ಪತ್ರಕರ್ತರು, ಗ್ರಾಮ ಪಂಚಾಯಿತಿ ಸದಸ್ಯರನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಪ್ರಜ್ವಲ ದಾನಪ್ಪಗೋಳ ಸ್ವಾಗತಿಸಿದರು. ಶಿಕ್ಷಕ ರಾಜು ತಳವಾರ ನಿರೂಪಿಸಿದರು. ಬಳಿಕ ನಡೆದ ಭಾಷಣ ಸ್ಪರ್ಧೆ, ಮುಕ್ತ ನೃತ್ಯ ಸ್ಪರ್ಧೆಗಳು ಗಮನ ಸೆಳೆದವು.



# ನಕಲಿ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕೆ ಘಟಕ ಪತ್ತೆ; 2 ಕೋಟಿ ರೂ. ಮೌಲ್ಯದ ಸಾಮಗ್ರಿ ವಶಕ್ಕೆ

ಬೆಂಗಳೂರು: ಕರ್ನಾಟಕ ಸರ್ಕಾರಿ ಸ್ವಾಮ್ಯದ ಮೈಸೂರು ಸ್ಯಾಂಡಲ್ ಸಾಬೂನನ್ನು ನಕಲಿಯಾಗಿ ತಯಾರಿಸಿ ಮಾರಾಟ ಮಾಡುತ್ತಿದ್ದ ಜಾಲವೊಂದನ್ನು ಹೈದರಾಬಾದ್'ನಲ್ಲಿ ಭೇದಿಸಲಾಗಿದೆ.

ಈ ಕಾರ್ಯಾಚರಣೆ ವೇಳೆ ನಕಲಿ ಉತ್ಪನ್ನ, ಅದರ ಪ್ಯಾಕಿಂಗ್ ಗೆ ಬಳಸುತ್ತಿದ್ದ ಬಾಕ್ಸ್ ಗಳು ಸೇರಿದಂತೆ ಸುಮಾರು ರೂ 2 ಕೋಟಿ ಮೌಲ್ಯದ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಪ್ರಕರಣ ಸಂಬಂಧ ಹೈದರಾಬಾದ್ ಮೂಲದ ರಾಕೇಶ್ ಜೈನ್ ಮತ್ತು ಮಹಾವೀರ್ ಜೈನ್ ಎಂಬುವವರನ್ನು ಬಂಧನಕ್ಕೊಳಪಡಿಸಲಾಗಿದೆ.

ನಕಲಿ ಮೈಸೂರ್ ಸ್ಯಾಂಡಲ್ ಸಾಬೂನು ಹೈದರಾಬಾದ್ ಮಾರುಕಟ್ಟೆಗೆ ಪೂರೈಕೆಯಾಗುತ್ತಿರುವ ಬಗ್ಗೆ ಕೆ ಎಸ್ ಡಿ ಎಲ್ ಅಧ್ಯಕ್ಷರೂ ಆದ ಸಚಿವ ಎಂ.ಬಿ ಪಾಟೀಲ್ ಅವರಿಗೆ ಅನಾಮಧೇಯ ಕರೆ ಬಂದಿತ್ತು.

ಬಳಿಕೆ ಸಚಿವರು ಇದರ ಮೇಲೆ ನಿಗಾ ಇಡುವಂತೆ ಕಾರ್ಖಾನೆ ವ್ಯವಸ್ಥಾಪಕ ನಿರ್ದೇಶಕ ಡಾ. ಪ್ರಶಾಂತ್ ಅವರಿಗೆ ಸೂಚಿಸಿದ್ದರು. ಅದರಂತೆ, ಸಿಕಂದರಾಬಾದಿನಲ್ಲಿರುವ ಸಂಸ್ಥೆಯ ಅಧಿಕೃತ ಮಾರಾಟ ಕಚೇರಿಯ ಸಿಬ್ಬಂದಿ ಈ ಬಗ್ಗೆ ಕಾರ್ಯಪ್ರವೃತ್ತರಾಗಿದ್ದರು. ಈ ವೇಳೆ ಹೈದರಾಬಾದಿನ ಕೆಲವು ಪ್ರದೇಶಗಳಲ್ಲಿ ನಕಲಿ ಸಾಬೂನು ಮಾರಾಟವಾಗುತ್ತಿರುವುದು ಗಮನಕ್ಕೆ ಬಂದಿದೆ. ಆದರೆ, ಪೂರೈಕೆದಾರರ ಬಗ್ಗೆ ಮಾಹಿತಿ ಸಿಕ್ಕಿರಲಿಲ್ಲ.

ಬಳಿಕ ಕೆಎಸ್'ಡಿಎಲ್ ಸಿಬ್ಬಂದಿ ಸ್ವತಃ ಒಂದು ಲಕ್ಷ ರೂಪಾಯಿ ಬೆಲೆಯ ಉತ್ಪನ್ನ ಖರೀದಿಸಿ, ಮೂಲ ಪತ್ತೆಗೆ ಮುಂದಾಗಿದ್ದರು. ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ಹೆಚ್ಚಿನ ಬೇಡಿಕೆ ಇದೆ ಎಂಬ ಕಾರಣ ಕೊಟ್ಟು 25 ಲಕ್ಷ ರೂಪಾಯಿ ಬೆಲೆಯ ಸೋಪು ಖರೀದಿಗೆ ಆರ್ಡರ್ ಕೊಟ್ಟಿದ್ದರು. ಅದನ್ನು ಸ್ವತಃ ತಾವೇ ವಾಹನದಲ್ಲಿ ಸಾಗಿಸುವ ನೆಪದಲ್ಲಿ ಉತ್ಪಾದನೆ ಮಾಡುತ್ತಿದ್ದ ಸ್ಥಳಕ್ಕೆ ತೆರಳಿದ್ದರು. ಹೀಗೆ ಕಾರ್ಯಾಚರಣೆ ನಡೆಸಿದಾಗ ನಕಲಿ ಉತ್ಪಾದನಾ ಘಟಕ ಪತ್ತೆಯಾಗಿದೆ ಎಂದು ಕೆಎಸ್'ಡಿಎಲ್ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಅವರು ಮಾಹಿತಿ ನೀಡಿದ್ದಾರೆ.

ಉತ್ಪಾದನಾ ಘಟಕದಲ್ಲಿ ತಲಾ 150 ಗ್ರಾಂ ತೂಕದ 3 ಸಾಬೂನುಗಳಿರುವ 20 ಬಾಕ್ಸ್ ಗಳು (ಪ್ರತಿಯೊಂದು ಬಾಕ್ಸ್ ನಲ್ಲಿ 90ರಂತೆ ಒಟ್ಟು 1800 ಪೀಸ್ ಗಳು), ತಲಾ 75 ಗ್ರಾಂ ನ 47 ಬಾಕ್ಸ್ ಗಳು (9400 ಪೀಸ್ ಗಳು), 150 ಗ್ರಾಂ ಸಾಬೂನು ಪ್ಯಾಕ್ ಮಾಡುವ 400 ಖಾಲಿ ಬಾಕ್ಸ್ ಗಳು ಮತ್ತು 75 ಗ್ರಾಂ ಸಾಬೂನು ಪ್ಯಾಕ್ ಮಾಡುವ 400 ಬಾಕ್ಸ್ ಗಳು ಪತ್ತೆಯಾಗಿವೆ ಎಂದು ತಿಳಿಸಿದ್ದಾರೆ.

# ಪತಿಯನ್ನೇ ಕೊಂದ ಪತ್ನಿ ಅರೆಸ್ಟ್



ಬೆಂಗಳೂರು: ಪ್ರಿಯಕರನ ಜೊತೆ ಸೇರಿ ಪತಿಯನ್ನೇ ಕೊಂದ ಪ್ರೇಮಿಗಳನ್ನು ಹೆಚ್‌ಎಸ್‌ಆರ್ ಲೇಔಟ್ ಪೊಲೀಸರು ಬಂಧಿಸಿದ್ದಾರೆ.

ನಂದಿನಿಬಾಯಿ ಮತ್ತು ನಿತೀಶ್ ಕುಮಾರ್ ಬಂಧಿತ ಆರೋಪಿಗಳು. ವೆಂಕಟ್ ನಾಯಕ್(30) ಕೊಲೆಯಾದ ವ್ಯಕ್ತಿ . ಇದೇ ತಿಂಗಳ 09ರಂದು ಹೆಚ್‌ಎಸ್‌ಆರ್ ಲೇಔಟ್ನ ಮನೆಯಲ್ಲಿ ಆರೋಪಿ ನಂದಿನಿಬಾಯಿ ತನ್ನ ಪ್ರಿಯಕರ ನಿತೀಶ್ ಕುಮಾರ್ ಜೊತೆ ಸೇರಿ ತನ್ನ ಪತಿ ವೆಂಕಟ್ ನಾಯಕ್ ತಲೆ ಮೇಲೆ ರುಬ್ಬುವ ಗುಂಡು ಹಾಕಿ ಕೊಲೆ ಮಾಡಿದ್ದರು.

ಸದ್ಯ ಆರೋಪಿಗಳನ್ನು ಅರೆಸ್ಟ್ ಮಾಡಲಾಗಿದೆ.

ಗಂಡ ಮನೆಯಲ್ಲಿ ಇಲ್ಲ ಎಂದು ಹೇಳಿ ನಂದಿನಿ ಬಾಯಿ ಜನವರಿ 09 ರಂದು ಪ್ರಿಯಕರ ನಿತೇಶ್ನನ್ನು ಹೆಚ್‌ಎಸ್‌ಆರ್ ಲೇಔಟ್ನ ತನ್ನ ಮನೆಗೆ ಕರೆಸಿಕೊಂಡಿದ್ದಳು. ಈ ವೇಳೆ ಗಂಡ ವೆಂಕಟನಾಯಕ್ ಧಿಡೀರ್ ಮನೆಗೆ ಬಂದಿದ್ದ.

ಮನೆಗೆ ಕಾಲಿಡುತ್ತಿದ್ದಂತೆ ರೂಮ್ನಲ್ಲಿ ತನ್ನ ಪತ್ನಿ ಬೇರೊಬ್ಬನ ಜೊತೆ ಆತ್ಮೀಯ ಸಲುಗೆಯಲ್ಲಿದ್ದದನ್ನು ಕಂಡು ಕೋಪಗೊಂಡಿದ್ದ. ಬಳಿಕ ಪತಿ–ಪತ್ನಿ ನಡುವೆ ಗಲಾಟೆಯಾಗಿದ್ದು ಜಗಳ ತಾರಕ್ಕಕ್ಕೇರಿ ಕೊಲೆ ನಡೆದಿದೆ. ನಂದಿನಿ ಹಾಗೂ ಆಕೆಯ ಪ್ರಿಯಕರ ಇಬ್ಬರು ಸೇರಿ ವೆಂಕಟನಾಯಕ್ನ ತಲೆ ಮೇಲೆ ರುಬ್ಬುವ ಗುಂಡು ಎತ್ತಾಕಿ ಕೊಲೆ ಮಾಡಿದ್ದಾರೆ.

# ಬೆಳಗಾವಿ: ವಿಶ್ವ ದಿವ್ಯಾಂಗರ ದಿನಾಚರಣೆ




ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ವಿಕಲಚೇತನರ ಸಬಲೀಕರಣ ಕೋಶವು ಸಮಾಜಕಾರ್ಯ ವಿಭಾಗದ ಸಹಯೋಗ ದೊಂದಿಗೆವಿಶ್ವ ದಿವ್ಯಾಂಗರ ದಿನಾಚರಣೆಯನ್ನು ಆಚರಿಸಿತು. ಕಾರ್ಯಕ್ರಮಕ್ಕೆ ಅಭಿಪ್ರೇರಣೆಯಾಗಿ ಶೇ.90ರಷ್ಟು ದಿವ್ಯಾಂಗತೆಯನ್ನು ಹೊಂದಿರುವ ಶಿಕ್ಷಣ ತಜ್ಞರೂ,ಉದ್ಯಮಶೀಲರೂ ಆದ ಶ್ರೀ. ಗಜಾನನ ಸಾಬಣ್ಣನವರು ಮುಖ್ಯ ಅತಿಥಿಯಾಗಿ ನೆರೆದಿದ್ದ ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಬೋಧಕ ಹಾಗೂ ಬೋಧಕೇತರ ಸಿಬ್ಬಂಧಿಗಳನ್ನು ಉದ್ಧೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಜೀವನ ನಡೆಸುವ ಕೌಶಲ್ಯ, ಜೀವನದಲ್ಲಿ ಸಾಧಿಸಲು ಮಾಡಬೇಕಾದ ಪ್ರಯತ್ನಗಳು, ಸಾಧಕರಾಗಲು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ಮನ ತಟ್ಟುವಂತೆ ವಿವರಿಸಿದರು, ಕನಸು ಕಾಣಬೇಕು ಹಾಗೂ ಕನಸ್ಸನ್ನು ಸಾಕಾರಗೊಳಿಸಲು ಗುರಿ ಉದ್ಧೇಶಗಳನ್ನು ಇಟ್ಟುಕೊಂಡು ಮುಂದುವರಿಯ ೧ಬೇಕೆಂದು ಕರೆಕೊಟ್ಟರು. ಪರೀಕ್ಷೆಗಳನ್ನು ಎದುರಿಸುವ ತಂತ್ರಗಾರಿಕೆಯನ್ನು ಹೇಳಿಕೊಟ್ಟರು.

ಇದರ ಜೊತೆಗೆ ಅಂಗವೈಕಲ್ಯತೆಯ ಬಗ್ಗೆ ಮಾತನಾಡಿದ ಅವರು ಅಂಗವೈಕಲ್ಯತೆ ಒಂದು ವೈಕಲ್ಯತೆ ಅಲ್ಲ, ಸಾಮರ್ಥ್ಯಭರಿತವಾದುದು. “I am not a disable, I am just a different model” ಎಂದು ಹೇಳುತ್ತಾ ವಿಶ್ವ ದಿವ್ಯಾಂಗ ದಿನದ ಮಹತ್ವವನ್ನು ಮನ ಮುಟ್ಟುವಂತೆ ತಿಳಿಸಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ಶ್ರೀಮತಿ. ರಾಜಶ್ರೀ ಜೈನಾಪುರ K.A.S., ಇವರೂ ಸಹ ಮುಖ್ಯ ಅತಿಥಿಗಳ ಮಾತಿಗೆ ಓಗೊಡುತ್ತಾ ತಾವು K.A.S.,ಅಧಿಕಾರಿಂಬಾಗಿ ಹೊರಹೊಮ್ಮಲು ಅನುಸರಿಸಿದ ಮಾರ್ಗಗಳನ್ನು ವಿದ್ಯಾರ್ಥಿಗಳಿಗೆ ಹೇಳಿದರು.

ವಿಕಲಚೇತನರ ಸಬಲೀಕರಣ ಕೋಶಕ್ಕೆ ಅಗತ್ಯ ಸೌಲಭ್ಯಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.ಕಾರ್ಯಕ್ರಮಕ್ಕೆ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿಗಳಾದ ಶ್ರೀ. ಭರತ ಡಿ. ಕಟ್ಟಿ, K.S.A.S., ಇವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯಮಾನ್ಯರನ್ನು ಹಾಗೂ ಉಪಸ್ಥಿತರಿದ್ದವರನ್ನು ಡಾ.ಸುಷ್ಮಾ ಆರ್., ಸಂಯೋಜಕರು, ದಿವ್ಯಾಂಗರ ಸಬಲೀಕರಣ ಕೋಶ, ಇವರು ಸ್ವಾಗತಿಸಿದರು. ಸಮಾಜಕಾರ್ಯದ ಮುಖ್ಯಸ್ಥರಾದಡಾ. ಅಶೋಕ ಆಂಟೋನಿ ಡಿ'ಸೋಜಾರವರು ಪ್ರಾಸ್ತಾವಿಕ ನುಡಿಗಳನ್ನು ಆಡಿದರು.

ಕಾರ್ಯಕ್ರಮದಲ್ಲಿ ದಿವ್ಯಾಂಗ ಸಾಧಕರನ್ನು ಹಾಗೂ ದಿವ್ಯಾಂಗ ಸಿಬ್ಬಂಧಿಗಳನ್ನು ಸನ್ಮಾನಿಸಲಾಯಿತು. ಈ ಸನ್ಮಾನ ಕಾರ್ಯಕ್ರಮವನ್ನು ಡಾ. ಸಿದ್ಧಲಿಂಗೇಶ್ವರ ಬಿದರಳ್ಳಿ, ಸಹಾಯಕ ಪ್ರಾಧ್ಯಾಪಕರು, ಸಮಾಜಕಾರ್ಯ ವಿಭಾಗ, ಇವರು ನಡೆಸಿಕೊಟ್ಟರು.

ಡಾ. ಸಂತೋಷ ಪಾಟೀಲ, ಸಹಾಯಕ ಪ್ರಾಧ್ಯಾಪಕರು, ಸಮಾಜಕಾರ್ಯ ವಿಭಾಗ, ಇವರು ವಂದನಾರ್ಪಣೆಯನ್ನು ನೆರವೇರಿಸಿಕೊಟ್ಟರು.

ಈ ಕಾರ್ಯಕ್ರಮಕ್ಕೆ ಎಲ್ಲಾ ವಿಭಾಗದ ಬೋಧಕ, ಬೋಧಕೇತರ ಸಿಬ್ಬಂಧಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕು. ವರ್ಷಾ ಮತ್ತು ಕು. ವೀಣಾ ಪ್ರಾರ್ಥನೆ ಸಲ್ಲಿಸಿದರು.ಕಾರ್ಯಕ್ರಮವನ್ನು ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳಾದ ಶ್ರೀಮತಿ. ದಿವ್ಯಶ್ರೀ ಹಾಗೂ ಶ್ರೀ. ಎಲ್ಲಪ್ಪಾ ನಿರೂಪಿಸಿದರು.

# ಈರೋಡ್ ನಲ್ಲಿ ನಡೆದ ದಕ್ಷಿಣ ವಲಯ ಕುಸ್ತಿ ಚಾಂಪಿಯನ್ ಶಿಪ್ : ಕರ್ನಾಟಕದ ಪುರಷ ಮತ್ತು ಮಹಿಳಾ ಕುಸ್ತಿಪಟುಗಳಿಂದ ಅತ್ಯುತ್ತಮ ಸಾಧನೆ



ಬೆಂಗಳೂರು: ತಮಿಳುನಾಡು ಅಮಚೂರ್ ವ್ರೆಸ್ಲಿಂಗ್ ಅಸೋಸಿಯೇಷನ್ ನಿಂದ ತಮಿಳುನಾಡಿನ ಈರೋಡ್ ನಲ್ಲಿ ಆಯೋಜಿಸಿದ್ದ ದಕ್ಷಿಣ ವಲಯ ಕುಸ್ತಿ ಚಾಂಪಿಯನ್ ಶಿಪ್ ನಲ್ಲಿ ಕರ್ನಾಟಕದ ಕುಸ್ತಿಪಟುಗಳು ಪಾರಮ್ಯ ಮೆರೆದಿದ್ದಾರೆ.

ಕರ್ನಾಟಕದ ನಿಂಗಪ್ಪ 55 ಕೆಜಿ ಗ್ರೀಕರಮನ್ ವಿಭಾಗದಲ್ಲಿ, 60 ಕೆಜಿ ಭಾಗದಲ್ಲಿ ಸುಲೇಮಾನ್ ತೇವಕರಿ, 63 ಕೆಜಿ ವಿಭಾಗದಲ್ಲಿ ಈಶ್ವರ್ ಡೆಂಗಿ, 67 ಕೆಜಿ ಬಾಗದಲ್ಲಿ ದಾನೇಶ್ ಗಲಿಗಲಿ, 77 ಕೆಜಿ ವಿಭಾಗದಲ್ಲಿ ಭೀಮ ಲಿಂಗೇಶ್ವರ, 82 ಕೆಜಿ ವಿಭಾಗದಲ್ಲಿ ಪರಮಾನಂದ ಭುಜಂಗೋಡ್, 87 ಕೆಜಿ ವಿಭಾಗದಲ್ಲಿ ವಿನಾಯಕ ಆದಿತ್ಯ, 97 ಕೆಜಿ ವಿಭಾಗದಲ್ಲಿ ಪ್ರವೀಣ್ ಹಿಪ್ಪರಗಿ ಹಾಗೂ 130 ಕೆಜಿ ವಿಭಾಗದಲ್ಲಿ ಬಸವರಾಜ್ ಅವರು ಚಿನ್ನದ ಪದಕ ಗೆದ್ದಿದ್ದಾರೆ.

ಫ್ರೈಸ್ಟೈಲ್ ನ 65 ಕೆಜಿ ವಿಭಾಗದಲ್ಲಿ ಕೊರವರ ಸಂಜೀವ, 70 ಕೆಜಿ ವಿಭಾಗದಲ್ಲಿ ಮಹೇಶ್ ಲಂಗೋಟಿ, 74 ಕೆಜಿ ವಿಭಾಗದಲ್ಲಿ ರೋಹನ್ ನಾರಾಯಣಗವಾಡೆ, 79 ಕೆಜಿ ವಿಭಾಗದಲ್ಲಿ ಮಂಜುನಾಥ್ ಗೌಡಪ್ಪನವರ್, 86 ಕೆಜಿ ವಿಭಾಗದಲ್ಲಿ ಸದಾಶಿವ ನಲವಡೆ, 92 ಕೆಜಿ ವಿಭಾಗದಲ್ಲಿ ಬಸವರಾಜ್ ಪಾಟೀಲ್, 97 ಕೆಜಿ ವಿಭಾಗದಲ್ಲಿ ಸುನಿಲ್ ಚಿನ್ನದ ಪದ ಗೆದ್ದಿದ್ದು, 57 ಕೆಜಿ ವಿಭಾಗದಲ್ಲಿ ಸೂರಜ್ ಅಣ್ಣಿಗೇರಿ, 60 ಕೆಜಿ ವಿಭಾಗದಲ್ಲಿ ಬಸವರಾಜ್ ಸಂತಿ, 125 ಕೆಜಿ ವಿಭಾಗದಲ್ಲಿ ಕಾಮೇಶ್ ಪಾಟೀಲ್ ಬೆಳ್ಳಿ ಪದಕ ಗಳಿಸಿದ್ದಾರೆ.

ಮಹಿಳೆಯರ ವಿಭಾಗದಲ್ಲಿ 50 ಕೆ.ಜಿ. ವಿಭಾಗದಲ್ಲಿ ಗೋಪವ್ವ ಖೋಡ್ಕಿ, ಸೋನಿಯಾ ಜಾಧವ್, 55 ಕೆಜಿ ವಿಭಾಗದಲ್ಲಿ ಐಶ್ವರ್ಯ ಕರಿಗಾರ್, 57 ಕೆ.ಜಿ. ವಿಭಾಗದಲ್ಲಿ ಶ್ರೀ ರಕ್ಷಾ ಕೆ ಆರ್, 59 ಕೆ.ಜಿ. ವಿಭಾದಲ್ಲಿ ಗಾಯತ್ರಿ ಸುತಾರ್, 62 ಕೆ.ಜಿ. ವಿಭಾದಲ್ಲಿ ರಕ್ಷಿತಾ ಸೂರ್ಯವಂಶಿ, 65 ಕೆ.ಜಿ. ವಿಭಾದಲ್ಲಿ ಸುಜಾತಾ ಪಾಟೀಲ್, 68 ಕೆ.ಜಿ. ವಿಭಾಗದಲ್ಲಿ ಲೀನಾ ಸಿದ್ದಿ ಚಿನ್ನದ ಪದ ಗೆದ್ದಿದ್ದು, 72 ಕೆಜಿ ವಿಭಾಗದಲ್ಲಿ ಅಸ್ನಾ ಸರೀನ್, 76 ಕೆ.ಜಿ. ವಿಭಾಗದಲ್ಲಿ ಮೇಘನಾ ಕಂಚಿನ ಪದಕ ಗಳಿಸಿದ್ದಾರೆ.

ಈ ವಿಜೇತ ಕುಸ್ತಿಪಟುಗಳಿಗೆ ಕರ್ನಾಟಕ ಕುಸ್ತಿ ಸಂಘದ ಅಧ್ಯಕ್ಷರಾದ ಶ್ರೀಯುತ ಬಿ.ಗಣರಂಜನ್ ಶೆಟ್ಟಿ ರವರು ಪದಕ ತೊಡಿಸಿ ಸಮಗ್ರ ಪ್ರಶಸ್ತಿಯನ್ನು ನೀಡುವ ಮೂಲಕ ಅಭಿನಂದಿಸಿದರು.

ಈ ಸಂದರ್ಭದಲ್ಲಿ ದಕ್ಷಿಣ ಭಾರತ ಕುಸ್ತಿಸಂಘದ ಕಾರ್ಯಧರ್ಶಿಗಳಾದ ವಿ.ಎನ್ ಪ್ರಸೂದ್, ಜಂಟಿ ಕಾರ್ಯದರ್ಶಿಗಳಾದ ಲೋಗನಾದನ್, ಕರ್ನಾಟಕ ಕುಸ್ತಿ ಸಂಘದ ಕಾರ್ಯಧರ್ಶಿ ಜೆ.ಶ್ರೀನಿವಾಸ, ಉಪಾಧ್ಯಕ್ಷರಾದ ಪ್ರಸಾದ್ ಶೆಟ್ಟಿ, ಜಂಟಿ ಕಾರ್ಯಧರ್ಶಿ ಕೆ.ಕುಮಾರ್ ಹಾಗೂ ತಾಂತ್ರಿಕ ಸಮಿತಿಯ ಮುಖ್ಯಸ್ಥರಾದ ವಿನೋದ್ ಕುಮಾರ್ ಕೆ ರವರು ಉಪಸ್ಥಿತರಿದ್ದರು.

# ಸಹಕಾರಿ ಪಡಿತರ ವಿತರಕರ ಕಾರ್ಯ ಶ್ಲಾಘನೀಯ: ಶಾಸಕ ಆಸೀಫ್ ಸೇಠ್

ಬೆಳಗಾವಿ: ಕರ್ನಾಟಕ ರಾಜ್ಯ ಸಹಕಾರಿ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘ ಬೆಳಗಾವಿಯಲ್ಲಿ ಅತ್ಯುತ್ತಮ ಕೆಲಸ ಮಾಡಿ ಜನರ ಮೆಚ್ಚುಗೆ ಪಡೆದಿದೆ ಎಂದು ಶಾಸಕ ಆಸೀಫ್ ಸೇಠ್ ಹೇಳಿದರು.

ಶನಿವಾರ ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರಿ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಜಿಲ್ಲಾ ಕೇಂದ್ರ ಬೆಳಗಾವಿ ಹಾಗೂ ಪದಗ್ರಹಣ ಮತ್ತು ನೂತನ ವರ್ಷದ ದಿನದರ್ಶಿಕೆ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದರು.

ಪಡಿತರ ವಿತರಕರಿಗೆ ಬಿಪಿಎಲ್ ಸೇರಿದಂತೆ ಎಲ್ಲ ಕಾರ್ಡುಗಳ ಗ್ರಾಹಕರಿಗೆ ನೀಡುವ ದವಸ ದಾನ್ಯಗಳ ಹಂಚಿಕೆ ಮಾಡುವುದರಲ್ಲಿ ತಮಗೆ ಬೆಂಬಲ ಬೆಲೆ ಸರಕಾರದಿಂದ ಮಾತುಕತೆ ನಡೆಸಿ ಅದನ್ನು ಹೆಚ್ಚಿಗೆ ಮಾಡಿಸಿಕೊಡುವ ಜವಾಬ್ದಾರಿ ನನ್ನ ಮೇಲಿದೆ ಎಂದು ಭರವಸೆ ನೀಡಿದರು.

ಸರಕಾರದ ಯೋಜನೆಗಳಲ್ಲಿ ಒಂದಾದ ಅನ್ನಭಾಗ್ಯ ಯೋಜನೆಯನ್ನು ಸಮರ್ಪಕವಾಗಿ ಜನರಿಗೆ ತಲುಪಿಸುವ ಕೆಲಸ ಮಾಡುತ್ತಿರುವ ಸಹಕಾರಿ ಪಡಿತರ ವಿತರಕರ ಸಂಘದ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ.



ನಿಮ್ಮ ಸಮಸ್ಯೆ ಏನೇ ಇದ್ದರೂ ನಾನು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಜೊತೆಗೆ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ಬಗೆ ಹರಿಸಿಕೊಡುವುದಾಗಿ ಇದೇ ಸಂದರ್ಭದಲ್ಲಿ ತಿಳಿಸಿದರು.

ಆಹಾರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕನವಾಡಿ ಮಾತನಾಡಿ, ಸಹಕಾರಿ ಪಡಿತರ ವಿತರಕರಿಗೆ ಸರಕಾರದಿಂದ ಬರಬೇಕಾದ ಕಮಿಷನ್ ಹಣ ತಡವಾಗಿ ಬರುತ್ತಿದೆ. ಸಹಕಾರಿ ಪಡಿತರ ವಿತರಕರಿಗೆ ಸರಕಾರ ಹೊಸ ಹೊಸ ತಂತ್ರಾಂಶಗಳಿಂದ ಸಾಕಷ್ಟು ಸಮಸ್ಯೆಯಾಗುತ್ತಿದೆ. ಫಲಾನುಭವಿಗಳಿಗೆ ಎಷ್ಟು ಧಾನ್ಯಗಳನ್ನು ವಿತರಿಸುತ್ತಾರೆ ಎನ್ನುವುದು ದಾಖಲೆ ಮಾಡುವುದು ಕಷ್ಟವಾಗುತ್ತಿದೆ. ಇದನ್ನು ಸರಳಿಕರಣ ಮಾಡಿಕೊಡಬೇಕಿದೆ ಎಂದರು.

ಉಪಮೇಯರ್ ರೇಷ್ಮಾ ಪಾಟೀಲ, ಪಾಲಿಕೆ ಉಪಆಯುಕ್ತ ಉದಯಕುಮಾರ ತಳವಾರ, ಕರ್ನಾಟಕ ರಾಜ್ಯ ಸಹಕಾರಿ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಉಪಾಧ್ಯಕ್ಷ ರಾಜಶೇಖರ ತಳವಾರ, ಸಂಘದ ಜಿಲ್ಲಾಧ್ಯಕ್ಷ ಶಾಂತಿನಾಥ ಬುಡವಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ಚಂಬಣ್ಣ ಹೊಸಮನಿ ವಹಿಸಿದ್ದರು.

ನೂತನ ಪದಾಧಿಕಾರಿಗಳಾಗಿ ಮಾಜಿ ತಾಪಂ ಸದಸ್ಯ ಸುರೇಶ ರಾಜುಕರ, ಸಂಘದ ಪ್ರಧಾನ ಕಾರ್ಯದರ್ಶಿ ದಿನೇಶ್ ಬಾಗಡೆ, ನಗರ ಅಧ್ಯಕ್ಷ ಬಾಳು ಪಾಟೀಲ, ಬಸವರಾಜ ದೊಡಮನಿ, ಉಮಾ ಸೋನವಾಡ್ಕರ್, ಬಾಬು ಶಿರಹಟ್ಟಿ, ಪ್ರಭು ಪಾಟೀಲ, ಸರೋಜಾ ದೊಡಮನಿ, ವೈಶಾಲಿ ಖಂಡಾರೆ, ಸುರೇಶ ರಾಜುಕರ, ಅರುಣ ಪಾಟೀಲ, ನಮೀವುಲ್ಲಾ ಅತ್ತಾರ, ಮಾರುತಿರಾವ್ ಅಂಬೋಳ್ಕರ್, ಉದಯ ಬಾಳೇಕುಂದ್ರಿ, ಪ್ರಮೋದ ಮುನವಳ್ಳಿ ಪದಗ್ರಹಣ ಮಾಡಿದರು. ಪುನಿತ ಬುಡವಿ ನಿರೂಪಿಸಿ, ವಂಧಿಸಿದರು.

# ಚಿಕಿತ್ಸೆ ಪಡೆಯುತ್ತಿದ್ದ ಆರೋಪಿ ಪರಾರಿ: ಬಲೆ ಬೀಸಿದ ಖಾಕಿ ಪಡೆ



ಚಿಕ್ಕಮಗಳೂರು: ಕೊಲೆ ಯತ್ನ ಪ್ರಕರಣ ಆರೋಪಿ ಜಿಲ್ಲಾಸ್ಪತ್ರೆಯಿಂದ ಪರಾರಿಯಾದ ಘಟನೆ ಚಿಕ್ಕಮಗಳೂರಿನಲ್ಲಿ ನಡೆದಿದೆ. ಬಾಳೆಹೊನ್ನೂರು ಸಮೀಪದ ಮಾಗಲು ಗ್ರಾಮದ ಕೆ.ಎಸ್ ಪೂರ್ಣೇಶ್ ಪರಾರಿಯಾಗಿದ್ದಾನೆ. ಪೂರ್ಣೇಶ್‌ನನ್ನು ಕಾಲಿಗೆ ಗುಂಡು ಹಾರಿಸಿ ಬಂಧಿಸಲಾಗಿತ್ತು. ಕಳೆದ ಕೆಲವು ತಿಂಗಳಿಂದ ಪೊಲೀಸರಿಂದ ಆತನಿಗೆ ಟ್ರಿಟ್ಮೆಂಟ್ ದೊರಕಿಸಲಾಗಿತ್ತು. ಅದಕ್ಕಾಗಿ ಚಿಕ್ಕಮಗಳೂರು ಜಿಲ್ಲಾಸ್ಪತ್ರೆಯಲ್ಲಿ ಆತನನ್ನು ದಾಖಲಿಸಿದ್ದರು. ಆದರಿಂದು ಪೂರ್ಣೇಶ್ ಪರಾರಿಯಾಗಿದ್ದಾನೆ.

ಇನ್ನು 7 ಪ್ರಕರಣದಲ್ಲಿ ಪೂರ್ಣೇಶ್ ಹೆಸರಿತ್ತು. ಹೀಗಾಗಿ ಆತನನ್ನು ಪೊಲೀಸರು ಬಂಧಿಸಿದ್ರು. ಐಪಿಸಿ 506, 326, 307 ಅರೆಸ್ಟ್ ಮಾಡಿದ್ದರು. ಕೊಲೆ ಯತ್ನ ಪ್ರಕರಣದಲ್ಲಿ ಕಾಲಿಗೆ ಗುಂಡು ಹೊಡೆದು ಬಂಧಿಸಿದ್ದರು. ಆದರೀಗ ಪೂರ್ಣೇಶ್ ತಪ್ಪಿಸಿಕೊಂಡಿದ್ದು, ಆತನಿಗಾಗಿ ಹುಡುಕಾಟ ನಡೆಯುತ್ತಿದೆ.



# ಉಚಿತ ನೇತ್ರ ತಪಾಸಣಾ ಶಿಬಿರಕ್ಕೆ ಚಾಲನೆ

ಬೆಳಗಾವಿ: ಬೆಳಗಾವಿ ರಾಮತೀರ್ಥ ನಗರದ ಸಮುದಾಯ ಭವನದಲ್ಲಿ ಸುರೇಶಯಾದವ ಫೌಂಡೇಶನ್ ಹಾಗೂ ಸಾಯಿದೀಪ ನೇತ್ರತಜ್ಞರು ಆಯೋಜಿಸಿದ್ದ ಉಚಿತ ತಪಾಸಣಾ ಶಿಬಿರಕ್ಕೆ ಮುಖ್ಯ ಅತಿಥಿಯಾಗಿ ಮಾಜಿ ಶಾಸಕ ಅನಿಲ ಬೆನಕೆ ಉಪಸ್ಥಿತರಿದ್ದು ಶಿಬಿರಕ್ಕೆ ಚಾಲನೆ ನೀಡಿದರು. ಈ ಬಾರಿ 100ಕ್ಕು ಹೆಚ್ಚು ಮಂದಿ ತಪಾಸಣೆಗೆ ಒಳಗಾದರು.

ಈ ಸಂದರ್ಭದಲ್ಲಿ ಫೌಂಡೇಶನ್ ಅಧ್ಯಕ್ಷ ಸುರೇಶಯಾದವ, ರಾಹುಲ ಹಿರೇಮನಿ, ಮಲ್ಹಾರ ದೀಕ್ಷಿತ, ಮಹೇಶ ಮೈನಕಟ್ಟಿ ಮೊದಲಾದವರು ಉಪಸ್ಥಿತರಿದ್ದರು.

# ಮಾನವೀಯ ಮೌಲ್ಯ ಮೈಗೂಡಿಸಿಕೊಳ್ಳಿ: ರಾಚೋಟಿ ಶಿರೂರ ಕಿವಿಮಾತು

ಬೆಳಗಾವಿ: ಕಾನೂನು ವೃತ್ತಿಯು ಅತ್ಯಂತ ಶ್ರೇಷ್ಠವಾದ ಹಾಗೂ ಗೌರವಾನ್ವಿವಾದ ವೃತ್ತಿಯಾಗಿದೆ. ನೂರೆಂಟು ಅವಕಾಶಗಳು ಅಲ್ಲಿವೆ. ವಿದ್ಯಾರ್ಥಿಗಳು ಅದನ್ನು ಅತ್ಯಂತ ಕಠಿಣ ಪರಿಶ್ರಮದಿಂದ ಸಾಧಿಸಿಕೊಳ್ಳಬೇಕೆಂದು ಬೆಳಗಾವಿಯ ಮೂರನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ ರಾಚೋಟಿ ಎಂ.ಶಿರೂರ ಹೇಳಿದರು.

ನಗರದ ಬಿ.ವಿ. ಬೆಲ್ಲದ ಕಾನೂನು ಮಹಾವಿದ್ಯಾಲಯದ ಪ್ರಸಕ್ತ ಸಾಲಿನ ವಿದ್ಯಾರ್ಥಿಒಕ್ಕೂಟ, ಉಚಿತ ಕಾನೂನು ಸೇವೆ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಶನಿವಾರ ನಗರದ ಕೆ.ಎಲ್.ಇ. ಸಂಸ್ಥೆಯ ಲಿಂಗರಾಜ ಕಾಲೇಜು ಸೆಂಟ್ರಲ್ ಹಾಲ್‌ನಲ್ಲಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು.



ಕಾನೂನು ಕೋರ್ಸ್‌ನ್ನು ತಮ್ಮ ವೃತ್ತಿಯನ್ನಾಗಿ ಆಯ್ಕೆ ಮಾಡಿಕೊಂಡ ಎಲ್ಲಾ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಕಾನೂನು ವೃತ್ತಿಯ ಮಹತ್ವವನ್ನು ಒತ್ತಿ ಹೇಳಿದರು. ವಿದ್ಯಾರ್ಥಿಗಳು ಕಠಿಣ ಪರಿಶ್ರಮ ಮತ್ತು ಯಶಸ್ಸನ್ನು ಸಾಧಿಸಬೇಕು. ಕಾನೂನು ವೃತ್ತಿ ಶಿಕ್ಷಣದಲ್ಲಿ ಬದಲಾವಣೆಗಳನ್ನು ತಂದಿದೆ. ಪ್ರಸ್ತುತ ಯುಗದಲ್ಲಿ ಕಾನೂನು ಪದವೀಧರರಿಗೆ ಲಭ್ಯವಿರುವ ವಿವಿಧ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ವಿದ್ಯಾರ್ಥಿಗಳು ಶ್ರಮವಹಿಸಿ ದುಡಿದು ಈ ಉದಾತ್ತ ವೃತ್ತಿಯಲ್ಲಿ ಉನ್ನತ ಸ್ಥಾನಕ್ಕೇರಬೇಕು.

ಎಷ್ಟೇ ಬುದ್ಧಿಶಕ್ತಿ ಇದ್ದರೂ ವಿದ್ಯಾರ್ಥಿಗಳು ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಬೆಲ್ಲದ ಕಾನೂನು ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ಹಾಗೂ ನ್ಯಾಯವಾದಿ ಆರ್.ಬಿ.ಬೆಲ್ಲದ ಅಧ್ಯಕ್ಷತೆ ವಹಿಸಿ ಮಾತನಾಡಿ,ವಿದ್ಯಾರ್ಥಿಗಳು ಕಾಲೇಜಿನಲ್ಲಿ ಸಿಗುವ ಎಲ್ಲಾ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಸಲಹೆ ನೀಡಿದರು. ಜಾಗತೀಕರಣವು ಕಾನೂನು ಪದವೀಧರರಿಗೆ ಅನೇಕ ಮಾರ್ಗಗಳನ್ನು ತೆರೆದಿದೆ ಎಂದು ಹೇಳಿದರು.

ಸುನಂದಾ ಮತ್ತು ತಂಡದವರು ಪ್ರಾರ್ಥಿಸಿದರು.

ಕಾಲೇಜಿನ ಪ್ರಾಂಶುಪಾಲ ಡಾ.ಬಿ.ಜಯಸಿಂಹ ಸ್ವಾಗತಿಸಿ, ಪರಿಚಯಿಸಿದರು. ವಿದ್ಯಾರ್ಥಿ ಕಾರ್ಯದರ್ಶಿ ಅಂತಿಮ ವರ್ಷದ ವಿದ್ಯಾರ್ಥಿ ವಿನಯ ಪೂಜಾರ ವಂದಿಸಿದರು. ಬಿಎಲ್ ಎಲ್ ಬಿ ವಿದ್ಯಾರ್ಥಿಗಳಾದ ಅನುಷಾ ಮತ್ತು ಆಕಾಶ್ ನಿರೂಪಿಸಿದರು.

ಈ ಸಂದರ್ಭದಲ್ಲಿ 2023 ನೇ ಸಾಲಿನಲ್ಲಿ ಸಹಾಯಕ ಸರಕಾರಿ ಅಭಿಯೋಜಕರಾಗಿ ನೇಮಕಗೊಂಡ ಶ್ರೀಮತಿ ಕವಿತಾ ಹಿರೇಮಠ, ಶ್ರೀಮತಿ ಗೋಪಿಕಾ ಹೊಸಮನಿ ಮತ್ತು ಅಕ್ಷಯ ವಾಲಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ಪ್ರೊ.ಉಮಾ ಹಿರೇಮಠ ಉಪಸ್ಥಿತರಿದ್ದರು. ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಮೆಡಿ ಅಸಿಸ್ಟ್ ಹೆಲ್ತ್ ಕೇರ್ ಸರ್ವೀಸ್ ಲಿಮಿಟೆಡ್ ಐಪಿಒ

ಹುಬ್ಬಳ್ಳಿ: ಮೆಡಿ ಅಸಿಸ್ಟ್ ಹೆಲ್ತ್ ಕೇರ್ ಸರ್ವೀಸ್ ಲಿಮಿಟೆಡ್, ಜನವರಿ 15, 2024ರ ಸೋಮವಾರ ಈಕ್ವಿಟಿ ಷೇರುಗಳ ಇನಿಷಿಯಲ್ ಪಬ್ಲಿಕ್ ಆಫರಿಂಗ್ ತೆರೆಯಲಿದೆ.

ಕೊಡುಗೆಯು ಸೋಮವಾರ, ಜನವರಿ 15, 2024ರಂದು ಚಂದಾದಾರಿಕೆಗಾಗಿ ತೆರೆಯುತ್ತದೆ ಮತ್ತು ಜ. 17 ರಂದು ಮುಕ್ತಾಯವಾಗುತ್ತದೆ.

ಆಫರ್‌ನ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ರೂ 397 ರಿಂದ ರೂ 418ಕ್ಕೆ ನಿಗದಿಪಡಿಸಲಾಗಿದೆ.

ಕನಿಷ್ಠ 35 ಈಕ್ವಿಟಿ ಷೇರುಗಳಿಗೆ ಮತ್ತು 35 ಇಕ್ವಿಟಿ ಷೇರುಗಳ ಮಲ್ಟಿಪಲ್ ಗಳಲ್ಲಿ ಬಿಡ್‌ಗಳನ್ನು ಮಾಡಬಹುದು.

ಆಫರ್ ಒಟ್ಟಾರೆಯಾಗಿ ಡಾ. ವಿಕ್ರಮ್ ಜಿತ್ ಸಿಂಗ್ ಛತ್ವಾಲ್ ಅವರಿಂದ 2,539,092 ಈಕ್ವಿಟಿ ಷೇರುಗಳನ್ನು, ಮೆಡಿ ಮ್ಯಾಟರ್ ಹೆಲ್ತ್ ಮ್ಯಾನೇಜ್‌ಮೆಂಟ್ ಪ್ರೈವೇಟ್ ಲಿಮಿಟೆಡ್‌ನಿಂದ 12,468,592 ವರೆಗೆ ಈಕ್ವಿಟಿ ಷೇರುಗಳು (ಮತ್ತು ಒಟ್ಟಾರೆಯಾಗಿ ಡಾ. ವಿಕ್ರಮ್ ಜಿತ್ ಸಿಂಗ್ ಛತ್ವಾಲ್, "ಪ್ರಮೋಟರ್




ಸೆಲ್ಲಿಂಗ್ ಷೇರ್ ಹೋಲ್ಡರ್ಸ್) ಬೆಸ್ಸೆಮರ್ ಹೆಲ್ತ್ ಕ್ಯಾಪಿಟಲ್ ಎಲ್‌ಎಲ್‌ಸಿಯಿಂದ 6,606,084 ವರೆಗಿನ ಈಕ್ವಿಟಿ ಷೇರುಗಳು (ಪ್ರಮೋಟರ್ ಗ್ರೂಪ್ ಸೆಲ್ಲಿಂಗ್ ಷೇರ್ ಹೋಲ್ಡರ್) ಇನ್ವೆಸ್ಟ್ ಕಾರ್ಪ್ ಪ್ರೈವೇಟ್ ಇಕ್ವಿಟಿ ಫಂಡ್ ಐ ನಿಂದ 6,275,706 ಇಕ್ವಿಟಿ ಷೇರುಗಳು (ಇನ್ವೆಸ್ಟರ್ ಸೆಲ್ಲಿಂಗ್ ಷೇರ್ ಹೋಲ್ಡರ್) ವಿವೇಕ್ ಪಂಡಿತ್ ಅವರಿಂದ 26,382 ವರೆಗೆ ಈಕ್ವಿಟಿ ಷೇರುಗಳು, ರಾಹುಲ್ ಎಂ ಖನ್ನಾ ಅವರಿಂದ 22,613 ವರೆಗಿನ ಈಕ್ವಿಟಿ ಷೇರುಗಳು, ಶಂಕರ್ ರಾವ್ ಪಾಲೆಪು ಅವರಿಂದ 17,337 ಈಕ್ವಿಟಿ ಷೇರುಗಳು (ಪಾಲೆಪುನೀನಾ ರಾವ್ ಅವರೊಂದಿಗೆ ಜಂಟಿಯಾಗಿ), ಪ್ರಮೋದ್ ಎಹುಜಾ ಅವರಿಂದ 17,337 ವರೆಗಿನ ಈಕ್ವಿಟಿ ಷೇರುಗಳು (ಜೆ ಮನೋಹರತ್ ಅಹುಜಾ), ಕೇಶವ ಸಂಘಿಯಿಂದ 17,337 ಇಕ್ವಿಟಿ ಷೇರುಗಳು (ವಿನಿತಾ ಕೇಶವ್ ಸಂಘಿಯೊಂದಿಗೆ ಜಂಟಿಯಾಗಿ), ಅಮಿತ್‌ಕುಮಾರ್ ಗಜೇಂದ್ರಕುಮಾರ್ ಪಟ್ನಿ ಅವರ 13,568 ವರೆಗೆ ಈಕ್ವಿಟಿ ಷೇರುಗಳು (ರುಚಿ ಅಮಿತ್‌ಕುಮಾರ್ ಪತ್ನಿ ಜೊತೆ ಜಂಟಿಯಾಗಿ), 13,568 ವರೆಗೆ ಈಕ್ವಿಟಿ ಷೇರುಗಳು ಅರಿಹಂತ್ ಪಟ್ನಿ, 5276 ರವರೆಗಿನ ಷೇರುಗಳು ಜ್ಯೋತಿ ಅಹುಜಾ(ಜೊತೆಗೆ ಪ್ರಮೋದ್ ಮನೋಹರ್ ಅಹುಜಾ) ಮತ್ತು ರಂಜನ್ ಸೂರಜ್‌ಪ್ರಕಾಶ್ ಸಂಘಿಯಿಂದ 5,276 ಇಕ್ವಿಟಿ ಷೇರುಗಳು (ಜಯಶ್ರೀ ಸಂಘಿಯೊಂದಿಗೆ ಜಂಟಿಯಾಗಿ) ಒಳಗೊಂಡಿದೆ.

ಜನವರಿ 9, 2024ರ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ಪ್ರತಿ ಈಕ್ವಿಟಿ ಷೇರುಗಳನ್ನು (ಆರ್‌ಎಚ್‌ಪಿ) ಬಿಎಸ್‌ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ಸ್ಟಾಕ್ ಎಕ್ಸ್ಚೇಂಜ್ ಗಳಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಆಫರ್‌ನ ಉದ್ದೇಶಗಳಿಗಾಗಿ, ಬಿಎಸ್‌ಇ ಗೊತ್ತುಪಡಿಸಿದ ಸ್ಟಾಕ್ ಎಕ್ಸ್ ಚೇಂಜ್ ಆಗಿದೆ.

# 23 ರಂದು ಮಂಟೂರ ಮಹಾಲಕ್ಷ್ಮೀ ಏತ ನೀರಾವರಿ ಯೋಜನೆ ಉದ್ಘಾಟನೆ




ಬೆಳಗಾವಿ: ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ನಿರ್ದೇಶನದ ಮೇರೆಗೆ ಮಂಟೂರ್ ಮಹಾಲಕ್ಷ್ಮೀ ಏತ ನೀರಾವರಿ ಯೋಜನೆ ಇದೇ 23 ರಂದು ಉದ್ಘಾಟನೆಯಾಗಲಿದ್ದು, ಸ್ಥಳಕ್ಕೆ ಹಿಡಕಲ್ ಡ್ಯಾಂ ಮಹಾಮಂಡಳ ನಿರ್ದೇಶಕರಾದ ವೆಂಕಣ್ಣ ಜಂಜಗಿ ಅವರು ಬೇಟಿ ನೀಡಿ, ನಿರ್ಮಾಣಗೊಳ್ಳುತ್ತಿರುವ ಮಂಟೂರ ಮಹಾಲಕ್ಷ್ಮೀ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು ಪರಿಶೀಲಿಸಿದರು.

ಬಿಳಗಿ, ಮುಧೋಳ್ ರೈತರ ಬಹಳ ದಿನಗಳ ಕನಸು ನನಸಾಗುವ ಕಾಲ ಸನ್ನಿಹವಾಗಿದ್ದು, ಬೀಳಗಿ ಕ್ಷೇತ್ರದಲ್ಲಿ 33 ಹಳ್ಳಿಗಳಿಗೆ ಹಾಗೂ ಮುಧೋಳ್ ತಾಲೂಕಿನ 13 ಹಳ್ಳಿ ಜನರಿಗೆ ನೀರಾವರಿ ಯೋಜನೆ ಅನುಕೂಲವಾಗಲಿದೆ. ಈ ಭಾಗದ ರೈತರ ಅಭಿವೃದ್ಧಿ ಹೊಂದಲು ಈ ಯೋಜನೆ ಬಹಳಷ್ಟು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಂಡಿತಪ್ಪ ಅಮಲಜರಿ, ಶ್ರೀಶೈಲ್ ಅ0ಟಿನ , ಅಧಿಕಾರಿಗಳಾದ ಎಚ್ ಆರ್ ಮಹಾರೆಡ್ಡಿ, ಮಧೋಳ ಮಂಜುನಾಥ ಮತ್ತು ಎಲೆಕ್ಟ್ರಿಷಿಯನ್ ವೆಂಕಟಾಚಲಯ್ಯ ಮತ್ತು ಸಚಿವರ ಆಪ್ತ ಸಹಾಯಕರಾದ ಪಾಂಡು ಮಣ್ಣಿಕೇರಿ ಅವರು ನೀರಾವರಿ ಯೋಜನೆ ನಿರ್ಮಾಣದ ಕಾಮಗಾರಿ ವೀಕ್ಷಿಸಿ ಉದ್ಘಾಟನೆ ದಿನಾಂಕವನ್ನು ತಿಳಿಸಿದರು.

# ರಾಷ್ಟ್ರೀಯ ಯುವ ದಿನಾಚರಣೆ



ಬೆಳಗಾವಿ: ಇಲ್ಲಿಯ ರಾಮಕೃಷ್ಣ ಮಿಷನ್ ಆಶ್ರಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ರಾಮಕೃಷ್ಣ ಮಿಷನ್ ಆಶ್ರಮದ ವತಿಯಿಂದ ಜಿಲ್ಲಾ ಮಟ್ಟದ ಯುವ ಸಪ್ತಾಹದ ಅಂಗವಾಗಿ ರಾಷ್ಟ್ರೀಯ ಯುವ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ರಾಮಕೃಷ್ಣ ಮಿಷನ್ ಆಶ್ರಮದ ಕಾರ್ಯದರ್ಶಿ ಸ್ವಾಮಿ ಆತ್ಮಪ್ರಾಣಾನಂದಜಿ ಮಹಾರಾಜ ಅವರು ಸಾನ್ನಿಧ್ಯ ವಹಿಸಿದ್ದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕ ಬಿ. ಶ್ರೀನಿವಾಸ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿ "ಆದರ್ಶ ಯುವಕರ ಲಕ್ಷಣಗಳು" ಎಂಬ ವಿಷಯದ ಬಗ್ಗೆ ಸ್ವಾಮಿ ನವದುರ್ಗಾನಂದಜಿ ಮಹಾರಾಜರು ಆಶೀರ್ವಚನ ನೀಡಿದರು.

ಸ್ವಾಮಿ ಮೋಕ್ಷಾತ್ಮನಂದಜಿ ಮಹಾರಾಜರು ಸ್ವಾಮಿ "ವಿವೇಕಾನಂದರು-ಯುವಕರ ಭವಿಷ್ಯ ನಿರ್ಮಾಣ" ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು. ರಾಷ್ಟ್ರ ರಾಜ್ಯ ಯುವ ಪ್ರಶಸ್ತಿ ಪುರಸ್ಕೃತರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೆ ಬೆಳಗಾವಿಯ ವಿವಿಧ ಭಾಗಗಳಿಂದ 800 ಕ್ಕೂ ಹೆಚ್ಚು ಯುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಿದರು.

# ವಿವೇಕಾನಂದರ ತತ್ವ ಆದರ್ಶಗಳನ್ನು ಪಾಲಿಸೋಣ: ಬಿಇಒ ಮೋಹನ ದಂಡಿನ

ಬೆಟಸೂರ : "ವಿದ್ಯಾರ್ಥಿ ಜೀವನದಲ್ಲಿ ಏಕಾಗ್ರತೆ ಎಂಬುದು ಮಹತ್ವದ ಪಾತ್ರ ವಹಿಸುತ್ತದೆ. ಧೈರ್ಯವೇ ಜೀವನ, ಅಧೈರ್ಯವೇ ಮರಣ, ಆದ್ದರಿಂದ ಜೀವನದಲ್ಲಿ ಧೈರ್ಯದಿಂದ ಮುನ್ನುಗ್ಗಲು ಸ್ವಾಮಿ ವಿವೇಕಾನಂದರ ತತ್ವ ಆದರ್ಶಗಳನ್ನು ನಾವು ಪಾಲಿಸಬೇಕು" ಎಂದು ಬಿಇಒ ಮೋಹನ ದಂಡಿನ ತಮ್ಮ ಅಭಿಪ್ರಾಯ ಹಂಚಿಕೊಂಡರು.

ಬೆಟಸೂರ ಗ್ರಾಮದ ಸರಕಾರಿ ಮಾದರಿ ಕನ್ನಡ ಶಾಲೆಯಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ನಿಮಿತ್ಯ ಹಮ್ಮಿಕೊಂಡಿದ್ದ "ರಾಷ್ಟ್ರೀಯ ಯುವ ದಿನಾಚರಣೆ" ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು ವಿದ್ಯಾರ್ಥಿ ಜೀವನದಲ್ಲಿ ಏಕಾಗ್ರತೆ



ಅತೀ ಮುಖ್ಯವಾದ ಪಾತ್ರವನ್ನು ವಹಿಸುತ್ತದೆ, ಅದಕ್ಕಾಗಿ ಮಕ್ಕಳು ಶ್ರಮ ಪಟ್ಟು ಓದಬೇಕು ಎಂದರು.

ನಂತರ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಮಕ್ಕಳು ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಪ್ರಧಾನ ಗುರುಗಳಾದ ಯು.ಬಿ.ಸಿಂಗಾರಗೊಪ್ಪ ಸ್ವಾಗತಿಸಿದರು, ಶಿಕ್ಷಕ ಮಹೇಶ ಬೆಳವಡಿ ನಿರೂಪಿಸಿದರು, ಆರ್.ಎಚ್.ಕಾಳಿ ವಂದಿಸಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಪಿ.ಎನ್. ದೊಡಮನಿ, ಎಸ್.ಪಿ.ಹೂಲಿಕಟ್ಟಿ, ಎ.ಡಿ.ಕಬ್ಬಿನ, ಶಿಕ್ಷಕಿಯರಾದ ಎನ್.ಎಮ್.ಸಾಂಗ್ಲಿಕರ, ಪಿ.ಜಿ.ಉಡಕೇರಿ, ಎಸ್.ಯು.ಯಾತನೂರ ಮತ್ತು ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಕಾಯಕ ದಾಸೋಹಗಳು ಶರಣ ಮೌಲಿಕ ಕೊಡುಗೆಗಳು: ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು

ಬೆಳಗಾವಿ: ಹನ್ನೆರಡನೆಯ ಶತಮಾನದ ಶರಣರು ಜಗತ್ತಿಗೆ ನೀಡಿರುವ ಮಹತ್ವದ ಕೊಡುಗೆಗಳು ಕಾಯಕ-ದಾಸೋಹ-ಪ್ರಸಾದ ಸಿದ್ಧಾಂತಗಳು. ಪ್ರತಿಯೊಬ್ಬ ವ್ಯಕ್ತಿಯು ಸತ್ಯ ಶುದ್ಧ ಹಾಗೂ ಪ್ರಾಮಾಣಿಕವಾಗಿ ದುಡಿದು ಸಮಾಜಮುಖಿಯಾಗಿ ಬದುಕಬೇಕೆಂದು ಕಾರಂಜಿಮಠದ ಪೂಜ್ಯ ಗುರುಸಿದ್ಧ ಮಹಾಸ್ವಾಮೀಜಿಯವರು ನುಡಿದರು.

ಅವರು ಶಿವಬಸವ ನಗರದ ಲಿಂಗಾಯತ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯು ಆಯೋಜಿಸಿದ್ದ ಅಮವಾಸ್ಯೆ ಅನುಭಾವ ಗೋಷ್ಠಿಯಲ್ಲಿ ಆಶೀರ್ವಚನ ನೀಡಿದರು. ಸಮಾಜದ ಬೆಳವಣಿಗೆಯಲ್ಲಿ ದುಡಿಮೆಯ ಅವಶ್ಯಕತೆ ಇದೆ. ಕಷ್ಟಪಟ್ಟು ದುಡಿದಾಗ ವ್ಯಕ್ತಿ ಕಲ್ಯಾಣವು ಸಾಧ್ಯ, ಹಾಗೂ ಸಮಾಜದ ಕಲ್ಯಾಣವು ಸಾಧ್ಯ. ನಾವು ಮಾಡುವ ಕೆಲಸದಲ್ಲಿ ನಿಷ್ಠೆ ಹಾಗೂ ಸೇವಾಭಾವನೆ ಇರಬೇಕು. ನೆಪಕ್ಕೆ ಮಾಡಿದ ಕೆಲಸ ಕಾಯಕವಾಗಲಾರದು. ಕಾಯಕದ ಸಾರ್ಥಕತೆ ಇರುವುದು ದಾಸೋಹದಲ್ಲಿ ನಿರಂಭಾವದಿಂದ ಸಮಾಜಕ್ಕೆ ನಾವು ಗಳಿಸಿದ ಸೊಮ್ಮನ್ನು ಅರ್ಪಿಸಬೇಕು. ಇಂದು ನಾವೆಲ್ಲ ವ್ಯಕ್ತಿನಿಷ್ಠವಾಗಿ ಬದುಕುತ್ತಿದ್ದೇವೆ ಸಮಾಜನಿಷ್ಠವಾಗಿ ಸಮಾಜದ-ಧರ್ಮದ ಋಣವನ್ನು ತೀರಿಸಬೇಕಾಗಿದೆ. ಹಣಗಳಿಕೆವೊಂದೆ ಜೀವನವಲ್ಲ ಅದು ಸದ್‌ಮಾರ್ಗದಲ್ಲಿ ಸವೆಯುವಂತಾಬೇಕೆಂದು ತಿಳಿಹೇಳದರು.

'ಕಾಯಕ-ದಾಸೋಹ' ಕುರಿತು ಉಪನ್ಯಾಸವನ್ನು ನೀಡಿದ ಲಿಂಗರಾಜ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ.ಮಹೇಶ ಗುರನಗೌಡರ 'ಶರಣರು ಕಾಯಕಕ್ಕೆ



ದೈವೀಸ್ಪರ್ಶವನ್ನು ನೀಡಿದರು. ಕಾಯಕ ಆರ್ಥಿಕತೆಯ ತಳಹದಿ, ಬೆನ್ನೆಲುಬು. ಸಾಧಕ ಎಂಬ ಭಾವದಿಂದ ಕೈಗೊಳ್ಳುವ ಆತ್ಮಕ್ರಿಯೆ; ಪರಹಿತಕ್ಕಾಗಿ ಮಾಡುವ ಶಿವಕೇಂದ್ರಿ ಕ್ರಿಯೆ ಕಾಯಕ. ಶರಣರು ಕಾಯಕಕ್ಕೆ ಆಧ್ಯಾತ್ಮಿಕ ಅರ್ಥವನ್ನು ಕಲ್ಪಿಸಿದರು. ಪ್ರತಿಯೊಬ್ಬರು ತಮ್ಮ ಜೀವನ ನಿರ್ವಹಣೆಗಾಗಿ ಉದ್ಯೋಗವನ್ನು ಕೈಗೊಳ್ಳಬೇಕು. ತಾನು ಕೈಕೊಂಡ ಕೆಲಸ ಸಮಾಜಕ್ಕೆ ಹಾನಿಕಾರಕವಾಗಿರಬಾರದು. ಸಮಾಜದ ಅವಶ್ಯಕತೆಗಳನ್ನು ಪೂರೈಸುವಂತಿರಬೇಕು. ಅದರ ಫಲ ನನಗೆ ಮಾತ್ರವಲ್ಲದೆ ಸಮಾಜಕ್ಕೂ ದೊರೆಯಬೇಕು. ಈ ನಿರ್ಲಿಪ್ತ ಭಾವದಿಂದ ಮಾಡಿದ ಕೆಲಸ ಕಾಯಕವಾಗುತ್ತದೆ. ಶರಣರು ಕರ್ಮವಾದದಲ್ಲಿ ಜನ್ಮಾಂತರ ರಹಸ್ಯವನ್ನು ಖಂಡಿಸಿದರು. ವೃತ್ತಿ ಹುಟ್ಟಿನೊಂದಿಗೆ ಬರುವಂತಹದಲ್ಲ, ಅದು ನಮ್ಮ ಆಯ್ಕೆಯಲ್ಲಿದೆ ಎಂದರು. ಕರ್ಮಯೋಗಕ್ಕಿಂತ ಕಾಯಕಯೋಗಕ್ಕೆ ಆದ್ಯತೆ ನೀಡಿದರು. ಕಾಯಕ ಸಂಗ್ರಹ ಪ್ರವೃತ್ತಿಯನ್ನು ವಿರೋಧಿಸುತ್ತದೆ. ಶರಣರು ಎಲ್ಲಿಯೂ ಸಂಪತ್ತನ್ನು ಗಳಸಬೇಡಿ ಎಂದಿಲ್ಲ, ಅದನ್ನು ಮಡಗದಿರಿ ಎಂದಿದ್ದಾರೆ. ನಮ್ಮ ಪರಿಶ್ರಮದ ಫಲ ಸಮಾಜಕ್ಕೆ ವಿನಿಯೋಗವಾಗಬೇಕು. ಲಿಂಗರಾಜರಂತಹ ಅನೇಕ ಪುಣ್ಯಪುರುಷರು ತಮ್ಮ ದಾನವನ್ನು ದಾಸೋಹವನ್ನಾಗಿ ಮಾಡಿದರು. ದಾಸೋಹ ಎಂದರೆ ನಿರಂಭಾವದಿಂದ ಸರ್ವಸ್ವವನ್ನೂ ಅರ್ಪಿಸುವ ಭಾವ. ಭಗವಂತ ನೀಡಿದ್ದು ದಾನ, ಅದನ್ನು ಸಮಾಜಕ್ಕೆ ದಾಸೋಹಂಭಾವದಿಂದ ಸಮರ್ಪಿಸಬೇಕಾಗಿದೆ ಎಂದು ಅದರ ಮಹತ್ವವನ್ನು ತಿಳಿಸಿದರು.

ಮಹಾಸಭೆಯ ಜಿಲ್ಲಾ ಘಟಕದ ಅಧ್ಯಕ್ಷೆ ರತ್ನಪ್ರಭಾ ಬೆಲ್ಲದ ಅವರು ಮಾತನಾಡಿ, ಶರಣರ ವಿಚಾರಗಳು ಎಲ್ಲ ಕಾಲಕ್ಕೂ ಹೃದಯಸ್ಪರ್ಶಿ ಹಾಗೂ ಅನುಕರಣೀಯವೆನಿಸಿವೆ. ಅವುಗಳನ್ನು ಜೀವನಕ್ಕೆ ಅಳವಡಿಸಿಕೊಳ್ಳುವುದು ಮುಖ್ಯ. ನಮ್ಮ ಯುವಜನಾಂಗಕ್ಕೆ ಅವುಗಳನ್ನು ಮುಟ್ಟಿಸುವ ಗುರುತರ ಜವಾಬ್ದಾರಿ ನಮ್ಮದಾಗಿದೆ. ನಮ್ಮ ಮಕ್ಕಳಲ್ಲಿ ದುಡಿಯುವ ಪ್ರವೃತ್ತಿಯನ್ನು ರೂಢಿಸಿದ್ದಾದರೆ ದೇಶದಲ್ಲಿ ಉದ್ಯೋಗದ ಸಮಸ್ಯೆ ಇರುವುದಿಲ್ಲ. ಅವರನ್ನು ಸ್ವಾವಲಂಬಿಗಳನ್ನಾಗಿ ರೂಪಿಸುವುದು ಎಲ್ಲರ ಹೊಣೆಗಾರಿಕೆಯಾಗಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಡಾ.ಎಫ್.ವ್ಹಿ.ಮಾನ್ವಿ, ರಮೇಶ ಕಳಸಣ್ಣವರ, ನ್ಯಾಯವಾದಿ ವಿ.ಕೆ.ಪಾಟೀಲ, ಸುಧಾ ಪಾಟೀಲ, ಡಾ.ಗುರುದೇವಿ ಹುಲೆಪ್ಪನವರಮಠ, ನೀಲಗಂಗಾ ಚರಂತಿಮಠ, ಶಂಕರ ಚೊಣ್ಣದ, ಜಯಶೀಲಾ ಬ್ಯಾಕೋಡ ಉಪಸ್ಥಿತರಿದ್ದರು. ಸುಜಾತಾ ಮಠಪತಿ ವಚನ ಪ್ರಾರ್ಥನೆ ಸಲ್ಲಿಸಿದರು. ಸೋಮಲಿಂಗ ಮಾವಿನಕಟ್ಟಿ ಸ್ವಾಗತಿಸಿರು, ಜ್ಯೋತಿ ಮಾಳಿ ವಚನ ವಿಶ್ಲೇಷಣೆ ಮಾಡಿದರು. ಶೈಲಾ ಸಂಸುದ್ದಿ ಅತಿಥಿ ಪರಿಚಯಿಸಿದರು. ಕವಿತಾ ವಳಸಂಗ ವಂದಿಸಿದರು. ಗೀತಾ ಗುಂಡಕಲ್ಲೆ ನಿರೂಪಿಸಿದರು.

VOL. 04 ISSUE. 292 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089